ಸಂಪುಟ : 10 ಸಂಚಿಕೆ: 282 ಪುಟ : 4+2 ಬೆಲೆ: 3.00 ಬುಧವಾರ ಡಿಸೆಂಬರ್ 24 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 282 Pages : 4+2 Price : 3.00 Wednesday December 24 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ ಪ್ರೀಮಿಯರ್ ಲೀಗ್ ಕ್ರಿಕೆಟ್ ನಾಳೆಯಿಂದ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಭಾಗದ ಜನತೆ ಕಾತರದಿಂದ ಕಾಯುತ್ತಿರುವ ವೈಟ್ ಲೆದರ್‌ಬಾಲ್ ಟೂರ್ನಮೆಂಟ್ 'ಗದಗ ಪ್ರೀಮಿಯರ್ ಲೀಗ್' ಡಿ. 25ರಿಂದ ಪ್ರಾರಂಭಗೊಳ್ಳಲಿದೆ.

ಈ ಬಾರಿ ಗದಗ ಟೈಟಾನ್ಸ್ ತಂಡದ ಪರವಾಗಿ ಯುವ ನಾಯಕರಾದ ಕೆ.ಹೆಚ್. ಪಾಟೀಲರು ಮೈದಾನಕ್ಕಿಯಿಳಿಲಿದ್ದಾರೆ. ಬಹು ದಿನಗಳಿಂದ ಯುವಕರು, ಕ್ರಿಕೆಟ್ ಅಭಿಮಾನಿಗಳಲ್ಲಿ ಹಾಗೂ ಅಭಿಮಾನಿಗಳಲ್ಲಿ ಕುತೂಹಲ ಮೂಡಿಸಿದ ಈ ಪಂದ್ಯ ಆರಂಭಗೊಳ್ಳಲಿದು ಸಂತೋಷದ ವಿಷಯವಾಗಿದೆ.

ಗದಗ-ಬೆಟಗೇರಿಯ ಎ.ಎಸ್.ಎಸ್ ಕಾಲೇಜ್ ಆಫ್ ಕಾಮರ್ಸ್ ಮೈದಾನದಲ್ಲಿ ಪಂದ್ಯಗಳು ನಡೆಯಲಿದ್ದು, ಗದಗ ನಗರದ ಯುವಕರು, ಕ್ರೀಡಾಭಿಮಾನಿಗಳು ಟೂರ್ನಮೆಂಟ್‌ಗೆ ಸಾಕ್ಷಿಯಾಗಬೇಕೆಂದು ಗದಗ-ಬೆಟಗೇರಿ ಶಹರ ಯುವ ಕಾಂಗ್ರೆಸ್ ಅಧ್ಯಕ್ಷ ಅನ್ವರ್ ನದಾಫ್ ಹಾಗೂ ಅಭಿಷಯ್ ಕ್ರಿಕೆಟ್ ಅಭಿಮಾನಿಗಳಿಗೆ ಸ್ವಾಗತ ಕೋರಿದ್ದಾರೆ.

## ಡಿ. 26ರಂದು ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಗದಗ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಡಿ. 26ರಂದು ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ. ಸದರಿ ಉಪಕೇಂದ್ರಗಳಿಂದ ಪೂರೈಕೆಯಾಗುವ ಜಿಮ್ಸ್ ಆಸ್ಪತ್ರೆ, ಕುಡಿಯುವ ನೀರಿನ ಸ್ಥಾವರಗಳು, 33 ಕೆವ್ಹಿ ಐ.ಪಿಪಿ-ಕೆ.ಪಿ.ಸಿ.ಎಲ್, ನಾಗಾವಿ, ಮಲ್ಲಸಮುದ್ರ, ಪಯೋನಿರ್, ಟಿ.ಡಿ.ಪಿಎಲ್ 1 ಮತ್ತು 2, 33 ಕೆವಿ ಉಪಕೇಂದ್ರ-ಹುಲಕೋಟಿ, ಲಕ್ಕುಂಡಿ, ಕೆ.ಎಚ್.ಬಿಹಾಗೂ ಎಲ್ಲಾ 11 ಕೆವ್ಹಿ ನಗರ, ಗ್ರಾಮೀಣ, ಕೈಗಾರಿಕಾ, ಸೋಲಾರ್ ಐ.ಪಿ.ಪಿ ಮತ್ತು ನೀರಾವರಿ ಪಂಪ್‌ಸೆಟ್‌ಗಳ ವಿದ್ಯುತ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯುವಾಗಲಿದೆ. ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಹೆಸ್ಕಾಂ ಪ್ರಕಟಣೆ ವಿನಂತಿಸಿದೆ.

## ಇಂದು ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ವಿಧಾನಸಭಾ ಕ್ಷೇತ್ರ ಗದಗ ನಗರ ಹಾಗೂ ಗದಗ ಗ್ರಾಮೀಣ ಮಂಡಲದ ವತಿಯಿಂದ ದ್ವೇಷ ಭಾಷಣ ಕಾನೂನು ಜಾರಿಗೆ ತಂದ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಡಿ. 24ರಂದು ಬೆಳಿಗ್ಗೆ 10 ಗಂಟೆಗೆ ನಗರದ ಗಾಂಧಿ ವೃತ್ತದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಗದಗ ಗ್ರಾಮೀಣ ಮಂಡಲ ಅಧ್ಯಕ್ಷ ಬೂದಪ್ಪ ಹಳ್ಳಿ, ಪ್ರಧಾನ ಕಾರ್ಯದರ್ಶಿಗಳಾದ ಶಂಕರ ಕಾಕಿ, ಸುರೇಶ ಚಿತ್ತರಗಿ, ಸುಭಾಸ ಸುಂಕದ, ಮಂಜುನಾಥ ಹಳ್ಳೂರಮಠ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 8.60 ಕೋಟಿ ರೂ ವೆಚ್ಚದ ಪ್ರಜಾಸೌಧ ಕಟ್ಟಡದ ಭೂಮಿಪೂಜೆ ನೆರವೇರಿಸಿದ ಶಾಸಕ ಜಿ.ಎಸ್. ಪಾಟೀಲ

# ಅಧಿಕಾರಿಗಳು ಜನಪರ ಕೆಲಸ ಮಾಡಿ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಗಜೇಂದ್ರಗಡ ತಾಲೂಕು ಎಂದು ಘೋಷಣೆಯಾಗಿ ಸುಮಾರು 8 ವರ್ಷಗಳೇ ಕಳೆದಿವೆ. ಆದರೆ, ಜನರಿಗೆ ತಲುಪುವಂತಹ ಯಾವುದೇ ಮೂಲಭೂತ ಸೌಕರ್ಯಗಳು ಇಲ್ಲಿ ದೊರೆಯುತ್ತಿಲ್ಲ. ತಾಲೂಕಿನಲ್ಲಿ ಸರಿಯಾಗಿ ಇಲಾಖೆಗಳ ಕಚೇರಿಗಳು ಇಲ್ಲದೆ ಜನರು ಅಲೆದಾಡಬೇಕಾಗಿತ್ತು. ಈಗ ಹಂತ ಹಂತವಾಗಿ ಇಲಾಖೆಗಳು ನಿರ್ಮಾಣಗೊಳ್ಳುತ್ತಿದ್ದು, ಅಧಿಕಾರಿಗಳಿಗೆ ಹಾಗೂ ಜನರಿಗೆ ಪ್ರಯೋಜನ ಆಗಲಿದೆ. ಇದಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.



ಪಟ್ಟಣದಲ್ಲಿ 8.60 ಕೋಟಿ ರೂ ವೆಚ್ಚದಲ್ಲಿ ಕಾಲಕಾಲೇಶ್ವರ ರಸ್ತೆಯಲ್ಲಿ ಗುಡ್ಡಕ್ಕೆ ಹೊಂದಿಕೊಂಡಿರುವ ಒಂದು ಎಕರೆ ಜಾಗದಲ್ಲಿ ನೂತನವಾಗಿ ನಿರ್ಮಿಸಲಾಗುವ 'ಪ್ರಜಾಸೌಧ' ತಾಲೂಕು ಆಡಳಿತ ಭವನ ನಿರ್ಮಾಣಕ್ಕೆ ಮಂಗಳವಾರ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಪ್ರಸ್ತುತ ಕಂದಾಯ ಇಲಾಖೆ ಕಟ್ಟಡದಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕೆಲಸ ಮಾಡುವುದು ಕಷ್ಟಕರವಾಗಿತ್ತು. ಇದನ್ನು ಪರಿಗಣಿಸಿ ಹೊಸ ಕಟ್ಟಡಕ್ಕೆ ಭೂಮಿ ಹುಡುಕಿ ಅನುಮೋದನೆ ತರುವಲ್ಲಿ ಬಹಳಷ್ಟು ಶ್ರಮಪಟ್ಟಿದ್ದೇವೆ. ಇನ್ನುಮುಂದೆ ಅಧಿಕಾರಿಗಳು ಸುಗಮವಾಗಿ ಕರ್ತವ್ಯ ನಿರ್ವಹಿಸಿ ಜನಪರ ಕೆಲಸ ಮಾಡಬೇಕು ಎಂದರು.

ಗಜೇಂದ್ರಗಡ ಮತ್ತು ಸೂಡಿ ಗ್ರಾಮವನ್ನು ಹೋಬಳಿ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಕೆಲವು ಗ್ರಾಮಗಳಲ್ಲಿ ಸ್ಮಶಾನ ಭೂಮಿಯ ಕೊರತೆ ಇದ್ದು, ಅತೀ ಶೀಘ್ರದಲ್ಲಿ ಭೂಮಿ ಹುಡುಕಲು ಕಂದಾಯ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಮುಂದಿನ ದಿನಗಳಲ್ಲಿ ನೂರು ಹಾಸಿಗೆಗಳ ಸಾಮರ್ಥ್ಯದ ಆಸ್ಪತ್ರೆ, ಮಾರುಕಟ್ಟೆ ನಿರ್ಮಾಣ, ಯುವಕರಿಗೆ ಕ್ರೀಡಾಂಗಣ ಮುಂತಾದ ಅಭಿವೃದ್ಧಿ ಕೆಲಸಗಳನ್ನು ಮಾಡಲು ಸರ್ಕಾರಕ್ಕೆ ಒತ್ತಾಯ ಮಾಡುತ್ತೇನೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕಲ್ಲಪ್ಪ ಸಜ್ಜನ್, ಶಿವರಾಜ್ ಘೋರ್ಪಡೆ, ತಾರಾಸಿಂಗ್ ರಾಠೋಡ್, ವೀರಣ್ಣ ಶೆಟ್ಟರ್, ಎಚ್.ಎಸ್. ಸೋಂಪುರ, ರಾಜೂ ಸಾಂಗ್ಲಿಕರ್, ಮುರ್ತುಜಾ ಡಾಲಾಯತ್, ರಫೀಕ್ ತೋರಗಲ್, ಸುಭಾಸ್ ಮ್ಯಾಗೇರಿ, ಭೀಮಣ್ಣ ತಳವಾರ, ಅರ್ಜುನ್ ರಾಠೋಡ್, ಶೇಖಪ್ಪ ರಾಮಜಿ, ತಾಲೂಕಾ ದಂಡಾಧಿಕಾರಿ ಕಿರಣಕುಮಾರ್ ಕುಲಕರ್ಣಿ, ತಾ.ಪಂ ಮುಖ್ಯಾಧಿಕಾರಿ ಚಂದ್ರಶೇಖರ ಕಂದಕೂರ, ಮಂಜುಳಾ ರೇವಡಿ, ಪ್ರಕಾಶ ರಾಠೋಡ, ಅಂದಪ್ಪ ರಾಠೋಡ, ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಇದ್ದರು.

> ಮುಖಂಡರಾದ ಸಿದ್ದಣ್ಣ ಬಂಡಿ ಮಾತನಾಡಿ, ರೈತರಿಗೆ ಹೆಸರು, ಮೆಣಸಿನಕಾಯಿ ಮುಂತಾದ ಬೆಳೆಗಳಿಗೆ ಪರಿಹಾರ ಮಂಜೂರಾಗಿದೆ. ಇನ್ನೂ 2550 ರೈತರಿಗೆ ಪರಿಹಾರ ಮಂಜೂರು ಮಾಡಬೇಕಾಗಿದ್ದು, ಕೆಲವು ತಾಂತ್ರಿಕ ಕಾರಣಗಳಿಂದ ಅದು ಆಗುತ್ತಿಲ್ಲ. ಗ್ಯಾರಂಟಿ ಯೋಜನೆಗಳಿಗೆ ಮಾತ್ರ ಹಣವನ್ನು ಬಳಸುತ್ತಿದ್ದಾರೆ. ಆದರೆ ಅಭಿವೃದ್ಧಿ ಕೆಲಸಗಳು ಆಗುತ್ತಿಲ್ಲ ಎಂದು ಹೇಳುವವರೂ ಇದ್ದಾರೆ. ಆದರೆ ಸರ್ಕಾರ ಅಭಿವೃದ್ಧಿ ಕೆಲಸಗಳಿಗೂ ಒತ್ತು ನೀಡಿದೆ ಎಂಬುದನ್ನು ಮರೆಯುವಂತಿಲ್ಲ ಎಂದರು.

### ಜಿಲ್ಲಾ ಕ್ರೀಡಾಂಗಣದಲ್ಲಿ ಅಂತರ ಜಿಲ್ಲಾ ಕ್ರೀಡಾ ವಸತಿ ನಿಲಯಗಳ ಕುಸ್ತಿ ಕ್ರೀಡಾಕೂಟಕ್ಕೆ ಚಾಲನೆ

# ಜಿಲ್ಲೆಯಲ್ಲಿರುವ ಕ್ರೀಡಾ ಸೌಲಭ್ಯಗಳು ಸದ್ಬಳಕೆಯಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಬೆಂಗಳೂರು ಹೊರತುಪಡಿಸಿ ಅತ್ಯುತ್ತಮವಾದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ಮಹಾತ್ಮ ಗಾಂಧಿ ಕ್ರೀಡಾಂಗಣ ಸೇರಿದಂತೆ ಉನ್ನತಮಟ್ಟದ ಕ್ರೀಡಾ ಸೌಲಭ್ಯಗಳಿದ್ದು, ಇವುಗಳನ್ನು ಬಳಸಿಕೊಂಡು ಜಿಲ್ಲೆಯಲ್ಲಿರುವ ಕ್ರೀಡಾಪಟುಗಳು ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಬೇಕೆಂದು ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಕರೆ ನೀಡಿದರು.



ಅವರು ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಗದುಗಿನ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದ ಕುಸ್ತಿ ಮನೆಯಲ್ಲಿ ಎರಡು ದಿನಗಳ ಕಾಲ 15, 17 ಮತ್ತು 23 ವರ್ಷ ವಯೋಮಿತಿಯೊಳಗಿನ ಬಾಲಕ/ಬಾಲಕಿಯರಿಗೆ ಏರ್ಪಡಿಸಲಾಗಿದ್ದ ಅಂತರ ಜಿಲ್ಲಾ ಮಟ್ಟದ ಕ್ರೀಡಾ ವಸತಿ ನಿಲಯಗಳ ಕುಸ್ತಿ ಸ್ಪರ್ಧೆಗಳಿಗೆ ಚಾಲನೆ ನೀಡಿ ಮಾತನಾಡಿದರು.

ಗದಗ ಜಿಲ್ಲೆಯಲ್ಲಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿರುವ ಬೀನು ಬಾಟ್, ರಾಜು ಬಾಗಡೆ, ವಿಲಾಸ ನೀಲಗುಂದ, ಹರೀಶ ಮುಟಗಾರ, ಪ್ರೇಮಾ ಹುಚ್ಚಣ್ಣವರ ನೀಲಮ್ಮ ಮಲ್ಲಿಗವಾಡ ಸೇರಿದಂತೆ ಹಲವಾರು ಕ್ರೀಡಾಪಟುಗಳು ಈಗಿನ ವಿದ್ಯಾರ್ಥಿಗಳಿಗೆ ಮಾದರಿಯಾಗಲಿ ಎಂದರು.

ಈ ಕುಸ್ತಿ ಪಂದ್ಯಾವಳಿಯಲ್ಲಿ ಗದಗ, ಶಿವಮೊಗ್ಗ, ಬಾಗಲಕೋಟೆ, ಧಾರವಾಡ, ದಾವಣಗೆರೆ, ಉತ್ತರಕನ್ನಡ, ಬೆಳಗಾವಿ ಜಿಲ್ಲೆಗಳಿಂದ 300ಕ್ಕೂ ಹೆಚ್ಚು ಕ್ರೀಡಾಪಟುಗಳು ಭಾಗವಹಿಸಿದ್ದು, ಕ್ರೀಡಾ ವಸತಿ ನಿಲಯದಲ್ಲಿ ತರಬೇತಿ ಪಡೆಯುತ್ತಿರುವ ಕ್ರೀಡಾಪಟುಗಳ ಪ್ರತಿಭೆ ಹೊರಬರಲು ಈ ಕ್ರೀಡಾಕೂಟ ಅನುಕೂಲಕರವಾಗಿದೆ. ಈ ಕ್ರೀಡಾಕೂಟವನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಮತ್ತು ಸಿಬ್ಬಂದಿ ವರ್ಗದವರು ಊಟ, ವಸತಿಯೊಂದಿಗೆ ಕ್ರೀಡಾಕೂಟದ ಆಯೋಜನೆ ಅಚ್ಚುಕಟ್ಟಾಗಿ ಮಾಡಿರುವುದಕ್ಕೆ ಅಭಿನಂದನೆಗಳನ್ನು ಸಲ್ಲಿಸಿ, ಎಲ್ಲ ವಿದ್ಯಾರ್ಥಿಗಳ ಗದುಗಿನ ಪ್ರವಾಸಿ ಸ್ಥಳಗಳನ್ನು ವೀಕ್ಷಿಸಿ, ಗದುಗಿನ ಇತಿಹಾಸ ಮತ್ತು ಸಂಸ್ಕೃತಿಯನ್ನು ಪರಿಚಯ ಮಾಡಿಕೊಳ್ಳಲಿ ಎಂದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಶರಣು ಗೋಗೇರಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಂ.ಎ. ಯರಗುಡಿ ನಿರೂಪಿಸಿ ವಂದಿಸಿದರು. ವೇದಿಕೆಯಲ್ಲಿ ಗದಗ ಜಿಲ್ಲಾ ಕುಸ್ತಿ ಸಂಘದ ಅಧ್ಯಕ್ಷ ವಸಂತ ಸಿದ್ದಮ್ಮನಹಳ್ಳಿ, ತರಬೇತುದಾರರಾದ ರಾಜು ಫಳಕೆ, ನಾಗರಾಜ, ಶಿವಾನಂದ, ಮಂಜು ಬಾಗಡೆ, ವಿದ್ಯಾ ಕುಲಕರ್ಣಿ, ರೂಪಾ ಗೌಡರ್ ಸೇರಿದಂತೆ ಇತರ ಜಿಲ್ಲೆಗಳ ತರಬೇತುದಾರರು ಮತ್ತು ಕ್ರೀಡಾಪಟುಗಳು ಉಪಸ್ಥಿತರಿದ್ದರು.

> ಕರ್ನಾಟಕ ಕುಸ್ತಿ ಅಸೋಸಿಯೇಷನ್ ನಿರ್ಣಾಯಕರ ತಂಡದ ಮುಖ್ಯಸ್ಥರಾದ ಡಾ. ವಿನೋದಕುಮಾರ ಮಾತನಾಡಿ, ಈಗಿನ ಕಾಲಮಾನದಲ್ಲಿ ಕ್ರೀಡೆಗಾಗಿ ಸಾಕಷ್ಟು ಅನುಕೂಲಗಳಿದ್ದು, ಅದರ ಉಪಯೋಗ ಪಡೆದುಕೊಂಡು ಕುಸ್ತಿ ಕ್ಷೇತ್ರದಲ್ಲಿ ಹೆಚ್ಚಿನ ಸಾಧನೆ ಮಾಡಬೇಕು. ಬೇರೆ ಜಿಲ್ಲೆಗಳಿಗೆ ಹೋಲಿಸಿದರೆ ಗದಗ ಜಿಲ್ಲೆಯಲ್ಲಿ ಸಾಕಷ್ಟು ಕ್ರೀಡಾ ಸೌಲಭ್ಯಗಳು ಇದ್ದು, ಅಂತಾರಾಷ್ಟ ಮಟ್ಟದ ಹಾಕಿ ಕ್ರೀಡಾಂಗಣ, 400 ಮೀ ಸಿಂಥೆಟಿಕ್ ಟ್ರ್ಯಾಕ್, ಪುಟ್‌ಬಾಲ್ ಪಿಚ್, ಕ್ರಿಕೆಟ್ ನೆಟ್ ಪ್ರ್ಯಾಕ್ಟಿಸ್, ಒಳಾಂಗಣ ಕ್ರೀಡಾಂಗಣಗಳು, ಈಜುಕೊಳಗಳು ಇದ್ದು ಕ್ರೀಡಾಪಟುಗಳು ಇದರ ಸದುಪಯೋಗ ಪಡೆದುಕೊಳ್ಳಲು ತಿಳಿಸಿದರು.

## ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಪೂರ್ವಸಿದ್ಧತಾ ಸಭೆ



■ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಕುರಿತು ಪೂರ್ವಸಿದ್ಧತಾ ಸಭೆಯು ಮಂಗಳವಾರ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಅವರ ಅಧ್ಯಕ್ಷತೆಯಲ್ಲಿ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿತು.

ಜನವರಿ 1ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತದ ವತಿಯಿಂದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆಯನ್ನು ಸರಳ ಹಾಗೂ ಸಾಂಕೇತಿಕವಾಗಿ ಆಚರಿಸಲು ಸಭೆಯಲ್ಲಿ ನಿರ್ಧರಿಸಲಾಯಿತು.

ಜಿಲ್ಲಾ ಉಸ್ತುವಾರಿ ಸಚಿವರ ಅನುಮತಿ ಪಡೆದು ಸಮುದಾಯದ ವತಿಯಿಂದ ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆಗೆ ಕ್ರಮ ವಹಿಸಲಾಗುವುದು ಎಂದು ಸಭೆಯಲ್ಲಿ ತೀರ್ಮಾನಿಸಲಾಯಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸ್ವಾಗತಿಸಿದರು. ಈ ಸಂದರ್ಭದಲ್ಲಿ ವಿವಿಧ ಇಲಾಖೆ ಅಧಿಕಾರಿಗಳು, ಸಮುದಾಯದ ಅಧ್ಯಕ್ಷರು, ಪ್ರಮುಖರು, ಹಿರಿಯರು ಹಾಜರಿದ್ದರು.

### ಪ್ರತಿಭಾ ಕಾರಂಜಿ, ಕಲೋತ್ಸವ ಕಾರ್ಯಕ್ರಮ ಉದ್ಘಾಟಿಸಿದ ಬಿಇಓ ಎಚ್.ಎನ್. ನಾಯ್ಕ

# ಮಗುವಿನಲ್ಲಿರುವ ಪ್ರತಿಭೆಯ ಅನಾವರಣವಾಗಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರತಿಯೊಂದು ಮಗುವು ತನ್ನದೇ ಆದ ವಿಶೇಷತೆಯನ್ನು ಹೊಂದಿರುತ್ತದೆ. ಆ ಮಗುವಿನಲ್ಲಿರುವ ವಿಶೇಷತೆಯನ್ನು ಗುರುತಿಸಿ, ವೇದಿಕೆ ಒದಗಿಸಿ, ಪ್ರತಿಭೆ ಅನಾವರಣ ಮಾಡುವುದು ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವದಂತಹ ಕಾರ್ಯಕ್ರಮಗಳು. ಇವುಗಳು ಮಗುವಿನ ಸರ್ವತೋಮುಖ ಬೆಳವಣಿಗೆಗೆ ಪೂರಕವಾಗಿರುತ್ತವೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಚ್. ಎನ್. ನಾಯ್ಕ ಅಭಿಪ್ರಾಯಪಟ್ಟರು.



ಅವರು ಲಕ್ಷ್ಮೇಶ್ವರದ ಫೀನಿಕ್ಸ್ ಸ್ಕೂಲ್‌ನಲ್ಲಿ ಹಮ್ಮಿಕೊಳ್ಳಲಾಗಿದ್ದ ಲಕ್ಷ್ಮೇಶ್ವರ ಉತ್ತರ ವಲಯದ ಪ್ರತಿಭಾ ಕಾರಂಜಿ ಹಾಗೂ ಲಕ್ಷ್ಮೇಶ್ವರ ಉತ್ತರ ಮತ್ತು ಮಾಗಡಿ ಕ್ಲಸ್ಟರ್ ಮಟ್ಟದ ಕಲೋತ್ಸವ ಕಾರ್ಯಕ್ರಮಗಳನ್ನು ಉದ್ಘಾಟಿಸಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಸ್. ಹರ್ಲಾಪುರ, ಪ್ರತಿವರ್ಷ ಈ ಭಾಗದ ಮಕ್ಕಳು ತಾಲೂಕು, ಜಿಲ್ಲೆ, ರಾಜ್ಯಮಟ್ಟದಲ್ಲಿ ಉತ್ತಮ ಸಾಧನೆ ತೋರುತ್ತಿದ್ದಾರೆ. ಅವರಿಗೆ ನಾವೆಲ್ಲ ಪ್ರೇರಣೆ ತುಂಬಿ ಪ್ರೋತ್ಸಾಹಿಸಬೇಕಾಗಿದೆ ಎಂದರು.

ಆನಂದ ಮುಳಗುಂದ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್.ಬಿ. ಕೊಣ್ಣೂರ ವಹಿಸಿದ್ದರು. ಬಿಆರ್‌ಪಿ ಈಶ್ವರ ಮೆಡ್ಲೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಫೀನಿಕ್ಸ್ ಸಂಸ್ಥೆಯ ಆಡಳಿತ ಮಂಡಳಿಯ ರಾಜಶೇಖರ ಹಾಲೇವಾಡಿಮಠ, ಶಿವಯೋಗಿ ಗಾಂಜಿ, ವಿಜಯ ಹತ್ತಿಕಾಳ, ಚಂದ್ರು ಕಗ್ಗಲಗೌಡರ, ಸುನಿತಾ ಯರ್ಲಗಟ್ಟಿ, ಕವಿತಾ ಮೆಣಸಗಿ, ಮಂಗಳಾ ಹುಲಮನಿ, ಬಿ.ಸಿ. ಪಟ್ಟೇದ, ಎಚ್.ಎಂ. ಗುತ್ತಲ, ಚಂದ್ರು ನೇಕಾರ, ಸಂಗಮೇಶ ಅಂಗಡಿ, ಎಸ್.ಡಿ. ಲಮಾಣಿ, ಎ.ಎಂ. ಅಕ್ಕಿ, ಬಿ.ಬಿ ಯತ್ತಿನಹಳ್ಳಿ, ಡಿ.ಡಿ. ಲಮಾಣಿ, ಎಲ್.ಎನ್. ನಂದೆಣ್ಣವರ, ಗೀತಾ ಹಳ್ಯಾಳ, ಎಂ.ಎ. ನದಾಫ್, ಎಂ.ಡಿ. ವಾರದ, ಬಿ.ಎಂ. ಯರಗುಪ್ಪಿ, ಎ.ಎಂ. ಛತ್ರದ, ಗಿರೀಶ ಸುಗಜಾನವರ, ಬಿ.ಎಂ. ಕುಂಬಾರ, ಎಸ್.ಸಿ. ಗೋಲಪ್ಪನವರ, ಎಸ್.ಜಿ. ಇಟಗಿ, ಜಿ.ಎನ್. ಮೆಳ್ಳಳ್ಳಿ, ಸಿಆರ್‌ಪಿ ಗಿರೀಶ ನೇಕಾರ, ಜ್ಯೋತಿ ಗಾಯಕವಾಡ, ಕೆ.ಪಿ. ಕಂಬಳಿ, ನವೀನ ಅಂಗಡಿ, ಶಿವಾನಂದ ಅಸುಂಡಿ, ಸಿ.ವಿ. ವಡಕಣ್ಣವರ, ಎನ್.ಎನ್. ಸಾವಿರಕುರಿ, ಎಸ್. ಎಚ್. ಮತ್ತೂರ ಉಪಸ್ಥಿತರಿದ್ದರು.

ಶಾಂಭವಿ ಅಕ್ಕೂರ, ಉಮೇಶ ನೇಕಾರ, ಎಲ್.ಎಂ. ಹುರಳಿಕುಪ್ಪಿ, ಎನ್.ಎಸ್. ಬಂಕಾಪುರ, ಎಚ್.ಡಿ. ನಿಂಗರೆಡ್ಡಿ, ಎನ್.ಎನ್. ಶಿಗ್ಲಿ ನಿರ್ವಹಿಸಿದರು. 15 ಶಾಲೆಗಳ ಸುಮಾರು 400 ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ವಿವಿಧ ಕ್ಲಸ್ಟರ್‌ನ ಶಿಕ್ಷಕರು ನಿರ್ಣಾಯಕರಾಗಿ ಭಾಗವಹಿಸಿದ್ದರು.

> ಶಿಕ್ಷಣಾಧಿಕಾರಿಗಳ ಸಂಘದ ಅಧ್ಯಕ್ಷ ಎಸ್.ಕೆ. ಹವಾಲ್ದಾರ ಮಾತನಾಡಿ, ಶಿಕ್ಷಣದ ಮುಖ್ಯ ಉದ್ದೇಶ ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿ. ಇದು ಸಾಧಿತವಾಗಬೇಕಾದರೆ ಕಲೆ, ಸಂಸ್ಕೃತಿ, ಸಾಹಿತ್ಯ ಎಲ್ಲವುಗಳಲ್ಲಿಯೂ ಕೂಡ ಮಗು ವಿಕಸನ ಹೊಂದುವುದು ಮುಖ್ಯ ಎಂದರು.

# ನುಡಿಸಿರಿ ಸಮ್ಮೇಳನದ ಸರ್ವಾಧ್ಯಕ್ಷರ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಇಲ್ಲಿನ ಕುಕನೂರಿನ ಕನ್ನಡ ಸಾಹಿತ್ಯ ಸಂಸ್ಕೃತಿ ಅಭಿವೃದ್ಧಿ ಟ್ರಸ್ಟ್ ಹಾಗೂ ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಸಹಯೋಗದಲ್ಲಿ ಜನವರಿ 4ರಂದು ಮೈಸೂರಿನ ವಿಜಯನಗರ ಮೊದಲ ಹಂತದಲ್ಲಿರುವ ಕನ್ನಡ ಸಾಹಿತ್ಯ ಭವನದಲ್ಲಿ ನಡೆಯಲಿರುವ ರಾಜ್ಯ ಮಟ್ಟದ 13ನೇ ಕನ್ನಡ ನುಡಿಸಿರಿ ಸಮ್ಮೇಳನಾಧ್ಯಕ್ಷರನ್ನಾಗಿ ಚುಟುಕು ಸಿರಿ ರತ್ನ ಹಾಲಪ್ಪ ಗೌಡರನ್ನು ಆಯ್ಕೆ ಮಾಡಲಾಗಿದೆ ಎಂದು ಸಮ್ಮೇಳನದ ಸಂಚಾಲಕ ರುದ್ರಪ್ಪ ಭಂಡಾರಿ ತಿಳಿಸಿದ್ದಾರೆ.

ಮೂಲತಃ ಮೈಸೂರಿನವರಾದ ಇವರು ಅನಿವಾಸಿ ಭಾರತೀಯರಾಗಿ ಕಳೆದ 25 ವರುಷಗಳಿಂದ ಕೆನಡಾ ದೇಶದಲ್ಲಿ ವಾಸವಾಗಿದ್ದಾರೆ. ಇವರ ಸರ್ವಾಧ್ಯಕ್ಷತೆಯಲ್ಲಿ ನಾಡಿನ ಸಂಸ್ಕೃತಿ ಪರಂಪರೆ, ನೆಲ, ಜಲ, ಶಿಕ್ಷಣ ಕುರಿತಾಗಿ ವಿಚಾರ ಗೋಷ್ಠಿ, ಕವಿಗೋಷ್ಠಿ, ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಸಾಧಕರಿಗೆ ಪ್ರಶಸ್ತಿ ಪ್ರದಾನ ಜರುಗಲಿದೆ ಎಂದು ಟ್ರಸ್ಟ್ ಅಧ್ಯಕ್ಷ ರುದ್ರಪ್ಪ ಭಂಡಾರಿ ಹಾಗೂ ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಉಪಾಧ್ಯಕ್ಷ ಡಾ. ತ್ಯಾಗರಾಜು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಲಕ್ಕುಂಡಿಯ ಸರಕಾರಿ ಹಿರಿಯ ಪ್ರಾಥಮಿಕ ಉರ್ದು ಶಾಲೆಯಲ್ಲಿ ವನಮಹೋತ್ಸವ ಕಾರ್ಯಕ್ರಮವನ್ನು ಎಸ್.ಡಿ.ಎಂ.ಸಿ ಅಧ್ಯಕ್ಷ ಮಹಮ್ಮದರಫೀಕ ಹುಬ್ಬಳ್ಳಿ ನೆರವೇರಿಸಿದರು. ಮುಸಲ್ಮಾನ ಗೆಳೆಯರ ಬಳಗವು ಕೊಡುಗೆ ನೀಡಿದ ತೆಂಗು, ದಾಳಂಬರಿ, ಲಿಂಬು ಹಣ್ಣಿನ ಸಸಿಗಳನ್ನು ಶಾಲೆಯ ಆವರಣದಲ್ಲಿ ನೆಟ್ಟು ವನಮಹೋತ್ಸವ ಆಚರಿಸಲಾಯಿತು. ಪ್ರಧಾನ ಗುರು ಎ.ಎನ್. ನರೇಗಲ್, ಸಹ ಶಿಕ್ಷಕ ಎಚ್.ಎಂ. ನದಾಫ್, ಸಕ್ರುಸಾಬ ನದಾಫ್, ಶಮೀರ ಹಿರೇಮನಿ ಸೇರಿದಂತೆ ಗೆಳೆಯರ ಬಳಗದ ಸದಸ್ಯರು ಹಾಜರಿದ್ದರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಯೋಜನೆಗಳಾದ ಮಾಜಿ ದೇವದಾಸಿ ಮಹಿಳೆಯರ ಪುನರ್ವಸತಿ ಯೋಜನೆ, ಉದ್ಯೋಗಿನಿ ಯೋಜನೆ, ಚೇತನ ಯೋಜನೆ, ಧನಶ್ರೀ ಯೋಜನೆ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಗಳಡಿ ಗ್ರಾಮ ಒನ್, ಕರ್ನಾಟಕ ಒನ್, ಬಾಪೂಜಿ ಸೇವಾ ಕೇಂದ್ರ, ಬೆಂಗಳೂರು ಒನ್, ಕೇಂದ್ರಗಳ ಮುಖಾಂತರ ಆನ್‌ಲೈನ್ ನಲ್ಲಿ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಧನಶ್ರೀ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಯೋಜನೆಯಡಿ ಆನ್‌ಲೈನ್ ಮತ್ತು ಆಫ್‌ಲೈನ್ ಎರಡರಲ್ಲೂ ಸಹ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದೆ. ಆಫ್‌ಲೈನ್ ಅರ್ಜಿಗಳನ್ನು ಉಪನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗದಗ ಇವರ ಕಚೇರಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಮೇಲ್ಕಾಣಿಸಿದ ಯೋಜನೆಗಳಡಿ ಸಲ್ಲಿಸಬೇಕಾದ ಅಗತ್ಯ ದಾಖಲಾತಿಗಳಾದ ಆಧಾರ್ ಕಾರ್ಡ್, ಆಧಾರ್ ಸೀಡಿಂಗ್ ಆಗಿರುವ ಬ್ಯಾಂಕ್ ಖಾತೆ ಪುಸ್ತಕ, ಯೋಜನಾ ವರದಿ, ಜಾತಿ & ಆದಾಯ, ಚೇತನ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಯೋಜನೆಗಳಡಿ ಸಂಸ್ಥೆಯಲ್ಲಿ ನೋಂದಣಿಯಾಗಿರುವ ಪ್ರಮಾಣ ಪತ್ರ, ದೇವದಾಸಿ ಮಹಿಳೆಯರು 1993-94/2007-08 ರಲ್ಲಿ ಸರ್ಕಾರದಿಂದ ನಡೆಸಿದ ಸಮೀಕ್ಷೆಯಲ್ಲಿ ಪಡೆದ ಪ್ರಮಾಣ ಪತ್ರ. ವಯಸ್ಸಿನ ಮಿತಿ : ಧನಶ್ರೀ ಯೋಜನೆ- 18-60 ವರ್ಷಗಳು, ಚೇತನ ಯೋಜನೆ- 18 ವರ್ಷ ಮೆಲ್ಪಟ್ಟು, ಉದ್ಯೋಗಿನಿ ಯೋಜನೆ- 18-55 ವರ್ಷ. ಈ ಹಿಂದಿನ ಸಾಲುಗಳಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೆ ಇರುವವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅಗತ್ಯ ಇರುವದಿಲ್ಲ. ಅರ್ಜಿ ಸಲ್ಲಿಸಲು ಕೊನೆಯ ದಿನ ಜನವರಿ 15 ರ ಸಂಜೆ 5.30 ಗಂಟೆಯವರೆಗೆ ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಅಭಿವೃದ್ಧಿ ನಿರೀಕ್ಷಕರು, ಉಪನಿರ್ದೇಶಕರ ಕಚೇರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾಡಳಿತ ಭವನ ರೂಮ್ ನಂ:-006 ಗದಗ. ಇವರನ್ನು ಸಂಪರ್ಕಿಸಬಹುದಾಗಿದೆ.

**ನಿವೃತ್ತ ಶಿಕ್ಷಕ ಎಂ.ಎ. ಹಿರೇವಡೆಯರ ಅವರ ಅಭಿನಂದನಾ ಗ್ರಂಥ 'ಒಲವಿನ ಒಡೆಯ' ಬಿಡುಗಡೆ**

# ಅನ್ನದಾನ, ವಿದ್ಯಾದಾನ ಶ್ರೇಷ್ಠ ದಾನಗಳು



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಒಬ್ಬ ವ್ಯಕ್ತಿಗೆ ಅನ್ನದಾನ ಮತ್ತು ವಿದ್ಯಾದಾನ ಮಾಡುವುದು ಈ ಜಗತ್ತಿನ ಎರಡು ಅತ್ಯಂತ ಮಹತ್ವದ ದಾನಗಳು. ಈ ಭಾಗದಲ್ಲಿ ಹಾಲಕೆರೆಯ ಶ್ರೀ ಅನ್ನದಾನೇಶ್ವರ ಮಠ ನೂರು ವರ್ಷಗಳ ಹಿಂದೆಯೇ ಈ ಕಾರ್ಯವನ್ನು ಮಾಡುತ್ತ, ಈ ನಾಡಿನ ಶ್ರೇಷ್ಠ ಮಠಗಳಲ್ಲಿ ಒಂದೆನಿಸಿದೆ. ಈಗಿನ ಪೀಠಾಧಿಪತಿಗಳಾಗಿರುವ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು ಅವರ ಗುರುಗಳಾಗಿದ್ದ ಲಿಂ. ಅಭಿನವ ಅನ್ನದಾನ ಮಹಾಸ್ವಾಮಿಗಳವರ ಕನಸನ್ನು ನನಸು ಮಾಡುವತ್ತ ದಿಟ್ಟ ಹೆಜ್ಜೆಯನ್ನಿರಿಸಿದ್ದಾರೆ ಎಂದು ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳವರು ನುಡಿದರು.

ಸಮೀಪದ ಹಾಲಕೆರೆಯ ಜಾತ್ರಾಮಹೋತ್ಸವದಲ್ಲಿ ಅವರು ನಿವೃತ್ತ ಶಿಕ್ಷಕ ಎಂ.ಎ. ಹಿರೇವಡೆಯರ ಅವರ ಅಭಿನಂದನಾ ಗ್ರಂಥ 'ಒಲವಿನ ಒಡೆಯ' ಬಿಡುಗಡೆ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಹಿರೇವಡೆಯರ ಗುರುಗಳು ಕೇವಲ ಶಿಕ್ಷಕರಾಗಿರದೆ ಉತ್ತಮ ಸಾಹಿತಿಗಳೂ ಆಗಿದ್ದಾರೆ. ಕನ್ನಡದ ಪುಸ್ತಕವನ್ನು ಇಂಗ್ಲೀಷಿಗೆ ತರ್ಜುಮೆ ಮಾಡಲು ಹೇಳಿದರೆ ಅತ್ಯಂತ ಶೀಘ್ರದಲ್ಲಿ ಅದನ್ನು ಭಾಷಾಂತರಿಸಿಕೊಡುವ ಸಾಮರ್ಥ್ಯವನ್ನು ಅವರು ಪಡೆದಿದ್ದಾರೆ. ಇದಕ್ಕೆಲ್ಲ ಶ್ರೀ ಗುರು ಅನ್ನದಾನೇಶ್ವರನ ಆಶೀರ್ವಾದವೇ ಕಾರಣ ಎಂದು ನಮ್ರತೆಯಿಂದ ಅವರು ನುಡಿಯುವದನ್ನು ಕೇಳಿದಾಗ ಅವರಲ್ಲಿನ ವಿನೀತ ಭಾವ ನಮಗೆ ತಿಳಿಯುತ್ತದೆ. ಅವರಿಗೆ ಇಂದು 'ಒಲವಿನ ಒಡೆಯ' ಅಭಿನಂದನಾ ಗ್ರಂಥ ಅರ್ಪಣೆಯಾಗುತ್ತಿರುವುದು ನಿಜಕ್ಕೂ ನಮಗೆ ಆನಂದವನ್ನು ನೀಡಿದೆ. ಇದಕ್ಕೆಲ್ಲ ಅನುಕೂಲತೆಯನ್ನು ಒದಗಿಸಿಕೊಟ್ಟ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು ಅಭಿನಂದನಾರ್ಹರು. ಅವರು ತಮಗೆ ಇಂಗ್ಲೀಷ್ ಕಲಿಸಿದ ಗುರುವಿನ ಋಣವನ್ನು ತೀರಿಸಲು ಪ್ರಯತ್ನಿಸಿ ಯಶಸ್ವಿಯಾಗಿದ್ದಾರೆ ಎಂದರು.

ಸಮ್ಮುಖ ವಹಿಸಿದ್ದ ನರೇಗಲ್ಲ ಹಿರೇಮಠದ ಷ.ಬ್ರ.ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಆಶೀರ್ವಚನ ನೀಡಿ, ಈ ಜಗತ್ತಿಗೆ ಉಪಯೋಗವಾಗಿ ಬದುಕಿದವರ ಜೀವನ ಚರಿತ್ರೆಗಳನ್ನು ತಿಳಿದು ಬದುಕಿದರೆ ನಮ್ಮ ಬದುಕು ಹಸನಾಗುತ್ತದೆ. ಇಂದಿನ ವಿದ್ಯಾರ್ಥಿಗಳು ಮೊಬೈಲ್ ಕಡೆಗೆ ಹೆಚ್ಚಿನ ಗಮನ ನೀಡದೆ ತಮ್ಮ ಅಭ್ಯಾಸದೊಂದಿಗೆ ಈ ಜಗತ್ತನ್ನು ಬೆಳಗಿದ ಮಹನೀಯರ ಚರಿತ್ರೆಗಳನ್ನು ಓದಬೇಕು. ಅಂತಹವರ ಸಾಲಿನಲ್ಲಿ ಇಂದು ಬಿಡುಗಡೆಯಾದ ಈ ಗ್ರಂಥವೂ ಸೇರುತ್ತದೆ ಎಂದರು.

ಒಬ್ಬ ಸ್ವಾಮೀಜಿ ಭಕ್ತರ ಮನೋಭಿಲಾಷೆಯನ್ನು ಅವರು ಹೇಳುವದಕ್ಕಿಂತ ಮುಂಚೆಯೇ ತಿಳಿದುಕೊಂಡು ನೆರವೇರಿಸುವವನಾಗಬೇಕು. ಅಂತಹ ಮಹತ್ವದ ಕಾರ್ಯವನ್ನು ಹಾಲಕೆರೆಯ ಶ್ರೀ ಅನ್ನದಾನೇಶ್ವರ ಮಠ ಮಾಡಿದೆ. ನಾವು ಒಂದು ತತ್ವವನ್ನು ಹಿಡಿದು-ಕೊಂಡು ಸಾಗಬೇಕು. ಅದುವೇ ದ್ವೇಷ ಬಿಡು, ಪ್ರೀತಿ ಮಾಡು ಎನ್ನುವದು. ಇದರಿಂದ ಇಡೀ ಜಗತ್ತನ್ನೇ ಗೆಲ್ಲಬಹುದು ಎಂದರು.

ಸಭೆಯನ್ನುದ್ದೇಶಿಸಿ ಗ್ರಂಥದ ಪ್ರಧಾನ ಸಂಪಾದಕ ಸಿ.ಆರ್. ಯರವಿನತೇಲಿಮಠ, ಎಂ.ಎ. ಹಿರೇವಡೆಯರ ಮಾತನಾಡಿದರು. ಸಂಪಾದಕ ಶಿವಾನಂದಯ್ಯ ಚರಂತಿಮಠ ಗ್ರಂಥದ ಪರಿಚಯ ಮಾಡಿದರು. ಉಪನ್ಯಾಸಕ ದೊಡ್ಡಮನಿ, ಉಪನ್ಯಾಸಕ ಎಫ್.ಎನ್. ಹುಡೇದ ನಿರೂಪಿಸಿದರು. ಡಾ. ಆರ್. ಕೆ. ಗಚ್ಚಿನಮಠ ಸ್ವಾಗತಿಸಿದರು. ಮುಖ್ಯ ಶಿಕ್ಷಕ ಸಂಗಮೇಶ ಹೂಲಗೇರಿ ವಂದಿಸಿದರು. ಮಠದ ಪೀಠಾಧಿಪತಿ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು ಆಶೀರ್ವಚನ ನೀಡಿದರು.

# ನಾಳೆ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಅಯ್ಯಪ್ಪಸ್ವಾಮಿ ಪೂಜೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ದಿ. ಗದಗ ಕೋ. ಆಪ್ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಗದಗ ಜಿಲ್ಲಾ ಶ್ರೀ ಅಯ್ಯಪ್ಪಸ್ವಾಮಿ ಸೇವಾ ಸಮಿತಿ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವೂ ಅಯ್ಯಪ್ಪಸ್ವಾಮಿ ಪೂಜಾ ಕಾರ್ಯಕ್ರಮ 25-12-2025ರಂದು ಸಂಜೆ 6.30ಕ್ಕೆ ಜರುಗಲಿದೆ.

ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಹಾಗೂ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷರಾದ ಡಿ.ಆರ್. ಪಾಟೀಲ ನೇತೃತ್ವ ವಹಿಸುವರು.

ಅಯ್ಯಪ್ಪಸ್ವಾಮಿ ಎಲ್ಲಾ ಮಾಲಾಧಾರಿಸ್ವಾಮಿಗಳು ಪೂಜೆಗೆ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ದಿ. ಗದಗ ಕೋ. ಆಪ್ ಕಾಟನ್ ಸೇಲ್ ಸೊಸೈಟಿ ಚೇರಮನ್ ರವಿ ಮೂಲಿಮನಿ, ಗದಗ ಶಹರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ ತಿಳಿಸಿದ್ದಾರೆ.

# ಜಿಲ್ಲಾ ವಕ್ಫ್ ಅಧಿಕಾರಿ, ಸಿಬ್ಬಂದಿಗಳಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಅಂಜುಮನ್-ಎ-ಇಸ್ಲಾಂ ಸಂಸ್ಥೆಯ ಅಧ್ಯಕ್ಷ ಅನ್ವರ್ ಎಚ್.ಬಾಗೇವಾಡಿ ಇವರ ನೇತೃತ್ವದಲ್ಲಿ ಗದಗ ಜಿಲ್ಲಾ ವಕ್ಫ್ ಅಧಿಕಾರಿ ಹಾಗೂ ಸಿಬ್ಬಂದಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ವಕ್ಫ್ ಮಂಡಳಿಗೆ ಸಂಬಂಧಿಸಿದಂತೆ ಎಲ್ಲಾ ಆಸ್ತಿಗಳನ್ನು ಉಮ್ಮಿದ್ ಪೋರ್ಟಲ್ ತಂತ್ರಾಂಶದಲ್ಲಿ ನಮೂದಿಸುವಂತೆ ಕೇಂದ್ರ ಸರ್ಕಾರ ನಿರ್ದೇಶನ ನೀಡಿತ್ತು. ಅದರಂತೆ ಕರ್ನಾಟಕದ 31 ಜಿಲ್ಲೆಗಳಲ್ಲಿ ಪ್ರಥಮವಾಗಿ ಗದಗ ಜಿಲ್ಲೆಯ ವಕ್ಫ್ ಆಡಳಿತ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು ಹಗಲು-ರಾತ್ರಿ ಮತ್ತು ರಜಾ ದಿನಗಳಲ್ಲಿ ಸುದೀರ್ಘವಾಗಿ ಕೆಲಸ ನಿರ್ವಹಿಸಿ ಜಿಲ್ಲೆಯ ವಕ್ಫ್ ಸಂಸ್ಥೆಗೆ ನೋಂದಣಿ ಇರುವ ಎಲ್ಲ ಆಸ್ತಿಗಳನ್ನು ಅವಧಿ ಪೂರ್ಣಗೊಳ್ಳುವ ಮುಂಚಿತವಾಗಿ ತಂತ್ರಾಂಶದಲ್ಲಿ ನಮೂದಿಸಿ ರಾಜ್ಯಕ್ಕೆ ಪ್ರಥಮವೆಂದು ಕೀರ್ತಿ ತಂದಿದ್ದಾರೆ.

ಸನ್ಮಾನ ಕಾರ್ಯಕ್ರಮದಲ್ಲಿ ಅಂಜುಮನ್-ಎ-ಇಸ್ಲಾಂ ಸಂಸ್ಥೆಯ ಉಪಾಧ್ಯಕ್ಷ ಎಂ.ಆರ್. ಸೋಂಪುರ, ಕಾರ್ಯದರ್ಶಿ ಎ.ಆರ್. ಕೊಪ್ಪಳ, ಖಜಾಂಚಿ ಎಂ.ಆರ್. ನಾರಾಯಣಕೇರಿ, ಸದಸ್ಯರುಗಳಾದ ಡಿ.ಎಫ್. ಮಲಸಮುದ್ರ, ಎ.ಕೆ. ಮುಲ್ಲಾ, ಎಂ.ಎಂ. ಬಿಜಾಪುರ, ಎಂ.ಜೆ. ಕದಡಿ, ಎಚ್.ಜಿ. ಕಾಗದಗಾರ, ಎ.ಜಿ. ದಂಡಿನ, ಎಸ್.ಎಂ. ಮಾಳೆಕೊಪ್ಪ, ನ್ಯಾಯವಾದಿಗಳಾದ ಎಂ.ಎ. ಮೌಲ್ವಿ, ಜೆಡಿಎಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹೆಚ್.ಹೆಚ್. ಕೊಪ್ಪಳ ಹಾಗೂ ಶಹರ/ಗ್ರಾಮೀಣ ಭಾಗದ ಮುಖಂಡರು, ಅಂಜುಮನ್ ಸದಸ್ಯರು ಭಾಗವಹಿಸಿದ್ದರು.

# ರೈತರ ಉತ್ಪನ್ನಗಳಿಗೆ ಉತ್ತಮ ದರ ಸಿಗಲಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರೈತ ದೇಶದ ಬೆನ್ನೆಲುಬು. ಅವನು ಕಷ್ಟಪಟ್ಟು ದುಡಿದಾಗ ನಮಗೆಲ್ಲ ಅನ್ನ ಸಿಗುತ್ತದೆ ಎಂಬುದನ್ನು ಮರೆಯಬಾರದು. ಕಾರಣ ರೈತರು ಬೆಳೆದ ಬೆಳೆಗೆ ಯಾವಾಗಲೂ ಉತ್ತಮ ದರ ಸಿಗುವ ವ್ಯವಸ್ಥೆ ಆಗಬೇಕು. ಆಗ ಮಾತ್ರ ಒಕ್ಕಲಿಗ ಬದುಕಲು ಸಾಧ್ಯ. ಈಚಿನ ದಿನಗಳಲ್ಲಿ ಬೆಳೆದ ಬೆಳೆಗೆ ಉತ್ತಮ ಬೆಲೆ ಸಿಗದ ಕಾರಣ ಯುವಕರು ಕೃಷಿ ಕ್ಷೇತ್ರಕ್ಕೆ ಹೋಗುತ್ತಿಲ್ಲ. ಹೀಗೆಯೇ ಪರಿಸ್ಥಿತಿ ಮುಂದುವರೆದರೆ ಮುಂದೊಂದು ದಿನ ಆಹಾರಕ್ಕಾಗಿ ಹಾಹಾಕಾರ ಉಂಟಾಗಬಹುದು. ಮಕ್ಕಳಿಗೆ ಬಾಲ್ಯದಲ್ಲಿಯೇ ರೈತರ ಬಗ್ಗೆ ಅರಿವು ಮೂಡಿಸುವ ಸಲುವಾಗಿ ಎಂಜಿಎಂ ಶಾಲೆಯವರು ಹಮ್ಮಿಕೊಂಡಿರುವ ರೈತ ದಿನಾಚರಣೆ ಉತ್ತಮ ಬೆಳವಣಿಗೆಯಾಗಿದೆ ಎಂದು ಸಿಆರ್‌ಪಿ ಶಿವಾನಂದ ಅಸುಂಡಿ ಅಭಿಪ್ರಾಯಪಟ್ಟರು.

ಪಟ್ಟಣದ ಎಂಜಿಎಂ ಯುನಿವರ್ಸಲ್ ಶಾಲೆಯಲ್ಲಿ ಬುಧವಾರ ಹಮ್ಮಿಕೊಂಡಿದ್ದ ರೈತ ಹಾಗೂ ಮಾರುಕಟ್ಟೆ ದಿನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಹೇಮಂತ್ ಟಗರಿ ಮಾತನಾಡಿ, ಮಕ್ಕಳಲ್ಲಿ ಮಾರುಕಟ್ಟೆಯ ಬಗ್ಗೆ ಜ್ಞಾನ ಉಂಟಾಗಲಿ ಎಂಬ ಉದ್ದೇಶದಿಂದ ನಾವು ಶಾಲೆಯಲ್ಲಿ ಮಾರುಕಟ್ಟೆ ದಿನ ಹಮ್ಮಿಕೊಂಡಿದ್ದೇವೆ. ವಿದ್ಯೆ ಪಡೆಯುವುದರೊಂದಿಗೆ ದಿನನಿತ್ಯದ ಬದುಕಿಗೆ ಅವಶ್ಯವಿರುವ ವಾಣಿಜ್ಯ, ವ್ಯವಹಾರ, ಮಾರುಕಟ್ಟೆಗಳ ಕುರಿತು ಮಕ್ಕಳು ತಿಳಿದುಕೊಳ್ಳಬೇಕು ಎಂದು ತಿಳಿಸಿದರು.

ಮಕ್ಕಳು ಮಾರುಕಟ್ಟೆ ದಿನದ ಅಂಗವಾಗಿ ತರಕಾರಿ, ಧಾನ್ಯ ಹಾಗೂ ಕೃಷಿ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟದ ಅನುಭವವನ್ನು ಪಡೆದರು. ಪಾಲಕರು ಉತ್ಸಾಹದಿಂದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಕ್ಕಳಿಗೆ ಪ್ರೋತ್ಸಾಹ ನೀಡಿದರು. ಅರುಣ ಉಮಚಗಿ ಸ್ವಾಗತಿಸಿದರು. ಪುಷ್ಪಾ ನರೇಗಲ್ಲ ನಿರೂಪಿಸಿದರು. ಶಿಕ್ಷಕಿಯರಾದ ಪ್ರೀತಿ ಹಾಗೂ ಯೋಗಿತಾ ವಂದಿಸಿದರು.

**ಇನ್ನೂ ಮುಗಿಯದ ಮೆಕ್ಕೆಜೋಳ ಖರೀದಿ ಗೊಂದಲ । ರೈತರ ಗೋಳು ಕೇಳುವವರಿಲ್ಲ**

# ಮೆಕ್ಕೆಜೋಳ ಖರೀದಿ ಪ್ರಕ್ರಿಯೆ ತ್ವರಿತಗೊಳಿಸಲು ಆಗ್ರಹ



ಕೆಎಂಎಫ್‌ನವರು ಗುಣಮಟ್ಟದ ಕಾರಣ ಮತ್ತು ಕೆಎಂಎಫ್ ಕೇಂದ್ರಕ್ಕೇ ಮೆಕ್ಕೆಜೋಳ ತಂದು ಕೊಡಬೇಕು ಮತ್ತು ಕೇವಲ 20 ಕ್ವಿಂಟಲ್ ಮಾತ್ರ ಖರೀದಿಸುತ್ತೇವೆ ಎಂಬ ನಿಯಮದಿಂದ ಕೆಎಂಎಫ್ ಸಂಸ್ಥೆಯ ಖರೀದಿ ಹೆಸರಿಗೆ ಮಾತ್ರ ಎನ್ನುವಂತಾಗಿದ್ದು, ಈ ಸಂಸ್ಥೆಯಡಿ ನೋಂದಾಯಿಸಿಕೊಂಡ ರೈತರು ಬೆಂಬಲ ಬೆಲೆ ಸೌಲಭ್ಯದಿಂದ ವಂಚಿತರಾದಂತಾಗಿದೆ.

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸರ್ಕಾರದ ಆದೇಶದ ಹಿನ್ನೆಲೆಯಲ್ಲಿ ಒಲ್ಲದ ಮನಸ್ಸಿನಿಂದ ಬೆಂಬಲೆ ಬೆಲೆಯಡಿ ಮೆಕ್ಕೆಜೋಳ ಖರೀದಿಸುತ್ತಿರುವ ಎಥೆನಾಲ್, ಕೆಎಂಎಫ್ ಮತ್ತು ಪೌಲ್ಟ್ರಿ ಕಂಪನಿಯವರ ಇಚ್ಛಾಶಕ್ತಿಯ ಕೊರತೆಯಿಂದ ಮೆಕ್ಕೆಜೋಳದ ಖರೀದಿ ಕೇಂದ್ರದ ಜವಾಬ್ದಾರಿ ಹೊತ್ತ ಟಿಎಪಿಸಿಎಂಎಸ್‌ನವರು ಸಾಕಷ್ಟು ತೊಂದರೆಗೆ ಸಿಲುಕಿದ್ದಾರೆ.

ಖರೀದಿ ಕೇಂದ್ರಗಳಿಗೆ ಯಾವುದೇ ಸ್ಪಷ್ಟ ಆದೇಶ, ಅನಕೂಲತೆ, ಸಹಕಾರ ಇಲ್ಲದ್ದರಿಂದ ಖರೀದಿ ಪ್ರಕ್ರಿಯೆ ಕುಂಟುತ್ತಾ ಸಾಗುತ್ತಿದೆ. ಮೆಕ್ಕೆಜೋಳ ಒಕ್ಕಲಿ ಮಾಡಿ 2 ತಿಂಗಳಾಗುತ್ತಾ ಬಂದರೂ ರೈತರು ಮೆಕ್ಕೆ ಜೋಳ ಮಾರಾಟ ಮಾಡಲು ಹೆಣಗಾಡುವ ಪರಿಸ್ಥಿತಿ ತಪ್ಪುತ್ತಿಲ್ಲ. ನಿತ್ಯ 2 ಸಾವಿರ ರೂ ಟ್ರ್ಯಾಕ್ಟರ್ ಬಾಡಿಗೆ ಕೊಟ್ಟು ರಾತ್ರಿಯಿಡೀ ಮೈ ಕೊರೆಯುವ ಚಳಿಯಲ್ಲಿ ಬೀದಿಯಲ್ಲಿ ಊಟ, ನಿದ್ರೆ ಮಾಡುವ ಕೆಟ್ಟ ಪರಿಸ್ಥಿತಿಯಿಂದ ರೈತರು ರೋಸಿ ಹೋಗಿದ್ದಾರೆ.

ಭಾನುವಾರ ಪಟ್ಟಣದಲ್ಲಿ ಗೋವಿನಜೋಳ ಬೆಂಬಲ ಬೆಲೆ ಖರೀದಿ ಕೇಂದ್ರದಲ್ಲಿ ಎಥೆನಾಲ್ ಕಂಪನಿಯಿಂದ ಮೆಕ್ಕೆಜೋಳ ಖರೀದಿ ಪ್ರಕ್ರಿಯೆ ಸ್ಥಗಿತಗೊಂಡು ಪೌಲ್ಟ್ರಿ ಕಂಪನಿಯಿಂದ ಮಾತ್ರ ಪ್ರಕ್ರಿಯೆ ಪ್ರಾರಂಭಗೊಳಿಸಲಾಗಿತ್ತು. ಎಥೆನಾಲ್ ಕಂಪನಿಯಲ್ಲಿ ನೋಂದಣಿಯಾದ ರೈತರು ಕಳೆದ 3/4 ದಿನಗಳಿಂದ ಸರದಿ ಸಾಲಿನಲ್ಲಿ ಕಾಯುತ್ತಿದ್ದಾರೆ. ರೈತರ್ಯಾರೂ ನಮ್ಮ ಮೆಕ್ಕೆಜೋಳವನ್ನು ಇಂತಹದ್ದೇ ಕಂಪನಿಯವರು ತೆಗೆದುಕೊಳ್ಳಬೇಕು ಎಂದು ಕೇಳಿಲ್ಲ. ಅರ್ಜಿ ಸಲ್ಲಿಕೆ ವೇಳೆ ಕಂಪನಿಗಳು ಹಂಚಿಕೆಯಾಗಿವೆ.

1 ತಿಂಗಳ ಹೋರಾಟದಿಂದ ನೋಂದಣಿ ಪ್ರಾರಭವಾಗಿ 15 ದಿನ ಕಳೆದರೂ ಬೆರಳೆಣಿಕೆಯಷ್ಟು ರೈತರು ಮಾತ್ರ ಮೆಕ್ಕೆಜೋಳ ಮಾರಾಟ ಮಾಡಿ ಹಣ ಯಾವಾಗ ಜಮೆ ಆಗುತ್ತದೆಯೋ ಎಂಬ ಭಯದಲ್ಲಿ ಕಾಯುತ್ತಿದ್ದಾರೆ.

ಈ ವೇಳೆ ಸ್ಥಳಕ್ಕೆ ಆಗಮಿಸಿದ ಟಿಎಪಿಸಿಎಂಎಸ್ ಅಧ್ಯಕ್ಷ ಸೋಮಣ್ಣ ಉಪನಾಳ ಮತ್ತು ಉಪಾಧ್ಯಕ್ಷ ಶೇಖಣ್ಣ ಕಾಳೆ ರೈತರನ್ನು ಸಮಾಧಾಗೊಳಿಸಿ ಮಾತನಾಡಿ, ಲಕ್ಷ್ಮೇಶ್ವರ ಟಿಎಪಿಸಿಎಂಎಸ್‌ನಲ್ಲಿ ಅತಿಹೆಚ್ಚು ರೈತರ ನೋಂದಣಿ ಮಾಡಿಕೊಂಡಿದ್ದೇವೆ. ಹೆಸರು ನೋಂದಾಯಿಸಿದ ರೈತರ ಮೆಕ್ಕೆಜೋಳ ಸರಕಾರದ ನಿಯಮದಂತೆ ಖರೀದಿಸಲು ನಾವು ಸಿದ್ಧರಿದ್ದೇವೆ. ಸದ್ಯಕ್ಕೆ ಎಥೆನಾಲ್ ಮತ್ತು ಪೌಲ್ಟ್ರಿ ಕಂಪನಿಗಳಿಂದ ಮೆಕ್ಕೆಜೋಳ ಖರೀದಿಸಲು ಆರಂಭ ಮಾಡಿದ್ದೇವೆ. ಸರಕಾರದ ಕಾರ್ಯದರ್ಶಿ, ಸಹಕಾರಿ ಮರಾಟ ಮಹಾಮಂಡಳ, ಜಿಲ್ಲಾಧಿಕಾರಿ, ಕೆಎಂಎಫ್‌ನವರೊಂದಿಗೆ ಪತ್ರ ವ್ಯವಹಾರ ನಡೆಸಲಾಗಿದೆ. ಯಾರಿಂದಲೂ ಸರಿಯಾದ ಸ್ಪಂದನೆ ಸಿಗುತ್ತಿಲ್ಲ. ಸರ್ಕಾರದ ಹಿರಿಯ ಅಧಿಕಾರಿಗಳೊಂದಿಗೆ ಸಂಪರ್ಕ ಮಾಡಿ ಇನ್ನೂ ಹೆಚ್ಚು ಖರೀದಿ ಮಾಡಲು ಮನವಿ ಮಾಡಿಕೊಳ್ಳುತ್ತಿದ್ದೇವೆ ಎಂದು ರೈತರಿಗೆ ಭರವಸೆ ನೀಡಿದರು.

ಈ ವೇಳೆ ರೈತರಾದ ರಾಜು ಸಾಲಮನಿ, ಬಸವರಾಜ ಕೊರಕನವರ, ಬಸವರಾಜ ಕರೆಣ್ಣವರ, ರವಿ ಬೋರ್ಜಿ, ಶಿವಾನಂದ ಕರೆಣ್ಣವರ, ಲೋಕೇಶ್ ಕುರಿ ನಾದಿಗಟ್ಟಿ, ಮಹಾಂತಗೌಡ ಪಾಟೀಲ ಇದ್ದರು.

# ಅಂಗವೈಕಲ್ಯ ಸಾಧನೆಗೆ ಅಡ್ಡಿಯಾಗದು



■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳು ಈಗಿನಿಂದಲೇ ಕನಸುಗಳನ್ನು ಕಂಡು ಸಾಧನೆಗೆ ಶ್ರಮಿಸಬೇಕು. ಸಾಧಿಸುವವರಿಗೆ ಅಸಾಧ್ಯವಾದದು ಯಾವುದೂ ಇಲ್ಲ. ಸಾಧಕರಿಗೆ ನಿರಂತರ ಶ್ರಮವೇ ಸಾಧನವಾಗುತ್ತದೆ ಎಂದು 1ನೇ ಸೌತ್ ಏಷ್ಯಾ ಪ್ಯಾರಾ ಸಿಟಿಂಗ್ ಥ್ರೋಬಾಲ್ ಚಾಂಪಿಯನ್‌ಶಿಪ್‌ನಲ್ಲಿ ಭಾರತೀಯ ತಂಡದ ನಾಯಕಿಯಾಗಿ ವಿಜಯ ಸಾಧಿಸಿದ ಮಾಲತಿ ಇನಾಮತಿ ಹೇಳಿದರು.

ಅವರು ನಗರದ ಗಂಗಾಪೂರ ಪೇಟೆಯಲ್ಲಿರುವ ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿಯಲ್ಲಿ ಹಮ್ಮಿಕೊಂಡಿದ್ದ ವಾರ್ಷಿಕ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿ, ಅಂಗವೈಕಲ್ಯ ಸಾಧನೆಗೆ ಅಡ್ಡಿಯಾಗುವದಿಲ್ಲ. ಮಕ್ಕಳು ತಮ್ಮಲ್ಲಿರುವ ಪ್ರತಿಭೆಯನ್ನು ಬೆಳಕಿಗೆ ತರಬೇಕು. ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಯಲ್ಲಿ ಪಾಲ್ಗೊಂಡು ತಮ್ಮ ಕನಸುಗಳನ್ನು ನನಸಾಗಿಸಿಕೊಳ್ಳಬೇಕು. ಮಂದಿನ ನಮ್ಮ ಗುರಿ ಅಂತಾರಾಷ್ಟ್ರೀಯ ಒಲಂಪಿಕ್‌ನಲ್ಲಿ ಪಾಲ್ಗೊಳ್ಳುವುದಾಗಿದೆ. ಈ ನಿಟ್ಟಿನಲ್ಲಿ ನಮ್ಮ ಶ್ರಮ ಮುಂದುವರೆದಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಸಾಧಕಿ ಮಾಲತಿ ಇನಾಮತಿ ಹಾಗೂ ಪುರುಷರ ತಂಡದಲ್ಲಿ ಬೆಳ್ಳಿ ಪದಕ ಪಡೆದ ಮಹಾಂತೇಶ ಬೇವೂರು ಮತ್ತು ಆನಂದ ಬೇಂದ್ರೆ ಅವರನ್ನು ಶಿಕ್ಷಣ ಸಮಿತಿಯ ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಶಿಕ್ಷಣ ಸಮಿತಿಯ ನಿರ್ದೇಶಕ ಮೋಹನ ಇಮರಾಪೂರ, ಸಲಹಾ ಸಮಿತಿಯ ಸದಸ್ಯರಾದ ಮುತ್ತು ಜಡಿ, ಲೋಕೇಶ ಮಲ್ಲಿಗವಾಡ, ಜೆಡಿಎಸ್ ಯುವ ಮುಖಂಡ ಪ್ರಭುರಾಜಗೌಡ ಪಾಟೀಲ, ಮುಖ್ಯೋಪಾಧ್ಯಾಯರಾದ ಎಚ್. ಎಂ. ನದಾಫ್, ಸಹ ಶಿಕ್ಷಕಿಯರಾದ ಮಂಜುಳಾ ಹಿಡ್ಕಿಮಠ, ರೇಖಾ ಅಂಗಡಿ, ಸುಧಾ ತಿರಕಣ್ಣವರ, ಶೋಭಾ ಸಂಬರಗಿಮಠ, ಮಂಜುಳಾ ದಾಸರ, ಅಂಜಲಿ ಕಲಾಲ, ಸಿಬ್ಬಂದಿಗಳಾದ ಲಕ್ಷ್ಮೀ ಕಮಡೊಳ್ಳಿ, ಸೈನಾಜಬಾನು ರೋಣ ಮುಂತಾದವರು ಉಪಸ್ಥಿತರಿದ್ದರು.

# ಹಕ್ಕು ಪಡೆಯದ ಬ್ಯಾಂಕ್ ಠೇವಣಿಗಳನ್ನು ವಾರಸುದಾರರಿಗೆ ಹಸ್ತಾಂತರಿಸುವ ಶಿಬಿರ

■ವಿಜಯಸಾಕ್ಷಿ ಸುದ್ದಿ, ಗದಗ

ದೀರ್ಘಕಾಲದಿಂದ ಹಕ್ಕು ಪಡೆಯದೆ ಉಳಿದಿರುವ ಬ್ಯಾಂಕ್ ಠೇವಣಿಗಳು, ವಿಮಾ ಕಂತುಗಳು ಮತ್ತು ಷೇರುಗಳನ್ನು ಅವುಗಳ ಮಾಲೀಕರು ಅಥವಾ ಕಾನೂನುಬದ್ಧ ವಾರಸುದಾರರಿಗೆ ಹಸ್ತಾಂತರಿಸುವ ಶಿಬಿರ ಡಿಸೆಂಬರ್ 29ರಂದು ಗದಗ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆಯಲಿದೆ.

ಈ ಶಿಬಿರವು ಭಾರತದ ಹಣಕಾಸು ಸಚಿವಾಲಯದ ಮಾರ್ಗಸೂಚಿಗಳ ಪ್ರಕಾರ ಎಲ್ಲ ಬ್ಯಾಂಕ್, ವಿಮಾ ಮತ್ತು ಇತರ ಇಲಾಖಾ ಶಾಖೆಗಳಲ್ಲಿ ನಡೆಯಲಿದೆ. ಅದರಂತೆ ದೀರ್ಘಕಾಲದವರೆಗೆ ಹಕ್ಕು ಪಡೆಯದ ಹಣಕಾಸಿನ ಸ್ವತ್ತುಗಳನ್ನು ಕಾನೂನುಬದ್ಧ ವಾರಸುದಾರರಿಗೆ ಮರುಪಡೆಯಲು ಸಹಾಯ ಮಾಡಲು ಈ ಶಿಬಿರವನ್ನು ನಡೆಸಲಾಗುತ್ತಿದೆ.

ಬ್ಯಾಂಕಿನಲ್ಲಿ ಮುಂದಿನ 10 ವರ್ಷಗಳ ಕಾಲ ನಿಷ್ಕ್ರಿಯ ಖಾತೆಗಳಲ್ಲಿರುವ ಹಣ ಮತ್ತು 10 ವರ್ಷಗಳಿಗಿಂತ ಹಳೆಯದಾದ ಕ್ಲೈಮ್ ಮಾಡದ ಠೇವಣಿಗಳನ್ನು (ಮೊತ್ತಗಳು) ಆರ್.ಬಿ.ಐ. ಡಿಇಎ ನಿಧಿಗೆ ವರ್ಗಾಯಿಸಲಾಗುತ್ತದೆ. ಇದನ್ನು ɔttps://udgam.rbi.org.ini ನಲ್ಲಿ ಕಂಡುಹಿಡಿಯಬಹುದು. ವಾರಸುದಾರರು ಅಥವಾ ನಿಮ್ಮ ಕಾನೂನುಬದ್ಧ ಉತ್ತರಾಧಿಕಾರಿಗಳು ಯಾವುದೇ ಸಮಯದಲ್ಲಿ ಅದನ್ನು ಕ್ಲೈಮ್ ಮಾಡಬಹುದು. ಬ್ಯಾಂಕಿಂಗ್ ವಲಯ, ವಿಮಾ ವಲಯ, ಹಣಕಾಸು ವಲಯ ಮತ್ತು ಇತರ ವಲಯಗಳ ಅಧಿಕಾರಿಗಳು ಈ ಶಿಬಿರದಲ್ಲಿ ಭಾಗವಹಿಸಿ ಸಲಹೆ ನೀಡಲಿದ್ದಾರೆ.

ಸಾರ್ವಜನಿಕರು ತಮ್ಮ ಸಂಬಂಧಿತ ಗುರುತಿನ ದಾಖಲೆಗಳು ಮತ್ತು ಅರ್ಹತಾ ಪತ್ರಗಳೊಂದಿಗೆ ಶಿಬಿರದಲ್ಲಿ ಭಾಗವಹಿಸಿ ಅಗತ್ಯ ಸಲಹೆ ಮತ್ತು ಸವಲತ್ತುಗಳನ್ನು ಪಡೆಯಬಹುದು ಎಂದು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಲೀಡ್ ಬ್ಯಾಂಕ್ ಮ್ಯಾನೇಜರ್ ಸಂತೋಷ್ ಎಂ.ವಿ ತಿಳಿಸಿದ್ದಾರೆ.

**ಸಿರಿಧಾನ್ಯ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ**

# ಸದೃಢ ಆರೋಗ್ಯಕ್ಕಾಗಿ ಸಿರಿಧಾನ್ಯ ಬಳಸಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಸಿರಿಧಾನ್ಯಗಳು ಪೋಷಕಾಂಶಗಳಿಂದ ಸಮೃದ್ಧವಾಗಿದ್ದು, ಹೃದಯದ ಆರೋಗ್ಯ, ಮಧುಮೇಹ ನಿಯಂತ್ರಣ ಮತ್ತು ತೂಕ ಸಮತೋಲನಕ್ಕೆ ಸಹಾಯಕವಾಗಿವೆ. ಈ ಆಹಾರಗಳ ಲಾಭ, ಉಪಯಕ್ತತೆ ಮತ್ತು ಬಳಕೆ ಕುರಿತಂತೆ ವ್ಯಾಪಕ ಅರಿವು ಮೂಡಿಸುವ ಕಾರ್ಯಕ್ರಮಗಳು ಬಹಳ ಮುಖ್ಯವಾಗಿದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ ಹೇಳಿದರು.

ಅವರು ಮಂಗಳವಾರ ಬೆಳಿಗ್ಗೆ ಕೃಷಿ ಇಲಾಖೆಯಿಂದ ಆಯೋಜಿಸಿದ್ದ ಸಿರಿಧಾನ್ಯಗಳ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಕಲಾಭವನ ಆವರಣದಲ್ಲಿ ಚಾಲನೆ ನೀಡಿ ಮಾತನಾಡಿದರು.



ನಮ್ಮಲ್ಲಿ ಪ್ರಚಲಿತವಿರುವ ಸಜ್ಜೆ, ನವಣೆ, ಸಾವೆ, ರಾಗಿ, ಹಾರಕ, ಬರಗು, ಕೊರಲೆ, ಊದಲು ಮುಂತಾದ ಸಿರಿಧಾನ್ಯಗಳು ನಾರಿನಂಶ ಮತ್ತು ಇತರೆ ಆರೋಗ್ಯ ಸಂಬಂಧಿ ಪೋಷಕಾಂಶಗಳನ್ನು ಒಳಗೊಂಡಿದ್ದು, ಸದೃಢ ಆರೋಗ್ಯಕ್ಕಾಗಿ ಇವುಗಳ ಬಳಕೆಯ ಅವಶ್ಯಕತೆ ಇದೆ. ಸಿರಿಧಾನ್ಯಗಳನ್ನು ಸಾಧಾರಣ ಫಲವತ್ತತೆಯ ಭೂಮಿಯಲ್ಲಿ ಹೆಚ್ಚಿನ ನೀರಿನ ಅವಶ್ಯಕತೆಯಿಲ್ಲದೆ ಬೆಳೆಯಬಹುದಾಗಿದ್ದು, ಇನ್ನಿತರ ಪರಿಕರಗಳ ಅವಶ್ಯಕತೆ ಇರುವದಿಲ್ಲ ಎಂದು ಹೇಳಿದರು.

ಕಡಿಮೆ ಖರ್ಚಿನಲ್ಲಿ ಸುಲಭ ನಿರ್ವಹಣೆಯೊಂದಿಗೆ ಬೆಳೆಯಬಹುದಾದ ಸಿರಿಧಾನ್ಯಗಳು ಪ್ರಸ್ತುತ ಸಣ್ಣ ಮತ್ತು ಅತೀ ಸಣ್ಣ ರೈತರನ್ನು ಒಳಗೊಂಡಂತೆ ರೈತ ಸಮುದಾಯಕ್ಕೆ ವರದಾನವಾಗಿವೆ. ಇವುಗಳ ವಿಸ್ತೀರ್ಣವನ್ನು ಹೆಚ್ಚಿಸುವದರೊಂದಿಗೆ ಗ್ರಾಹಕರ ಬಳಕೆಗೆ ಸೂಕ್ತವಾಗುವಂತೆ ಸಂಸ್ಕರಣೆ ಮಾಡುವದು ಅತ್ಯಂತ ಅವಶ್ಯಕವಾಗಿದೆ. ಈ ಕುರಿತಂತೆ ಸಾರ್ವಜನಿಕರಲ್ಲಿ ವ್ಯಾಪಕ ಅರಿವು ಮೂಡಿಸುವ ಉದ್ದೇಶದಿಂದ ಧಾರವಾಡ ಶಹರದಲ್ಲಿ ಕೃಷಿ ಇಲಾಖೆಯಿಂದ ವಾಕಥಾನ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಸಿರಿಧಾನ್ಯಗಳ ಸಾಗುವಳಿ, ಸಂಸ್ಕರಣೆ, ಮೌಲ್ಯವರ್ಧನೆ ಹಾಗೂ ಗ್ರಾಹಕರ ಬಳಕೆ ಕುರಿತಂತೆ ಸಾಕಷ್ಟು ಮಾಹಿತಿಯನ್ನು ಮತ್ತು ಜಾಗೃತಿಯನ್ನು ಮೂಡಿಸುವ ದೃಷ್ಟಿಯಿಂದ ಜಿಲ್ಲೆಯ ವಿವಿಧ ಸ್ಥಳಗಳಲ್ಲಿ ಇಂತಹ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸಿರಿಧಾನ್ಯ ಉತ್ಪನ್ನಗಳ ಕುರಿತು ಉತ್ಪಾದಕರು ಮತ್ತು ಬಳಕೆದಾರರು ಇಬ್ಬರಲ್ಲೂ ಸಾಕಷ್ಟು ತಿಳುವಳಿಕೆ ಮೂಡಿದ್ದು, ಸಾರ್ವಜನಿಕ ವಲಯದಿಂದ ಉತ್ತಮ ಸ್ಪಂದನೆ ದೊರೆತಿದೆ. ಸಿರಿಧಾನ್ಯಗಳು ನಮ್ಮ ಸಾಂಪ್ರದಾಯಿಕ ಆಹಾರದ ಬಹುಮುಖ್ಯ ಭಾಗವಾಗಿದ್ದು, ಆಧುನಿಕ ಜೀವನ ಶೈಲಿಗೆ ತಕ್ಕಂತೆ ಹೊಸ ವಿಧದ ಖಾದ್ಯಗಳನ್ನು ತಯಾರಿಸುವದಕ್ಕೆ ಪ್ರೋತ್ಸಾಹದ ಅಗತ್ಯವಿದೆ ಎಂದು ಮಂಜುನಾಥ ಅಂತರವಳ್ಳಿ ತಿಳಿಸಿದರು.

'ಬೆಳೆ ಉತ್ಪಾದನೆಯಾಚೆಗಿನ ಕೃಷಿ–ರೈತರ ಸಬಲೀಕರಣ' ಎಂಬ ವಾಕ್ಯದೊಂದಿಗೆ ಸಿರಿಧಾನ್ಯ ಬಳಕೆ ಕುರಿತು ಜಾಗೃತಿ ನಡಿಗೆಯ ಜಾಥಾ ಕಾರ್ಯಕ್ರಮವನ್ನು ಡಾ. ಮಲ್ಲಿಕಾರ್ಜುನ ಮನಸೂರ ಕಲಾಭವನದಿಂದ ಕೆ.ಸಿ.ಡಿ ವೃತ್ತದವರೆಗೆ ಆಯೋಜಿಸಲಾಗಿತ್ತು.

ಜನಜಾಗೃತಿ ಜಾಥಾ ನಡಿಗೆಯಲ್ಲಿ ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಕಾಶಿನಾಥ ಭದ್ರಣ್ಣವರ, ಮೀನುಗಾರಿಕೆ ಇಲಾಖೆಯ ಉಪ ನಿರ್ದೇಶಕ ಶ್ರೀಪಾದ ಕುಲಕರ್ಣಿ, ಉಪ ಕೃಷಿ ನಿರ್ದೇಶಕರಾದ ನಟರಾಜ ಟಿ.ಹೆಚ್, ಸಂದೀಪ ಜಿ.ಆರ್ ಸೇರಿದಂತೆ ಕಲಘಟಗಿ, ಹುಬ್ಬಳ್ಳಿ, ಕುಂದಗೋಳ ಹಾಗೂ ನವಲಗುಂದ ಸಹಾಯಕ ಕೃಷಿ ನಿರ್ದೇಶಕರು, ಕೃಷಿ ಇಲಾಖೆಯ ಎಲ್ಲ ಅಧಿಕಾರಿ/ಸಿಬ್ಬಂದಿಗಳು ಹಾಗೂ ವಿವಿಧ ಕೃಷಿಯೇತರ ಇಲಾಖೆಯ ಅಧಿಕಾರಿಗಳು/ಸಿಬ್ಬಂದಿಗಳು ಭಾಗವಹಿಸಿದ್ದರು.

**ಸ.ಹಿ.ಪ್ರಾ ಶಾಲೆ ನಂ.1ಕ್ಕೆ ಭೇಟಿ ನೀಡಿದ ಹಳೆಯ ವಿದ್ಯಾರ್ಥಿ ರಾಜಕುಮಾರ ಅಗಡಿ**

# ಯಾರೂ ಶಿಕ್ಷಣದಿಂದ ವಂಚಿತರಾಗಬಾರದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮಾಜದಲ್ಲಿ ಉತ್ತಮ ಶಿಕ್ಷಣ ಪಡೆಯುವದು ಎಲ್ಲರ ಹಕ್ಕಾಗಿದೆ. ಶಿಕ್ಷಣ ಎನ್ನುವದು ಜಗತ್ತಿನ ಅತಿದೊಡ್ಡ ಶಕ್ತಿ. ಇದರಿಂದ ಯಾರೂ ವಂಚಿತರಾಗಬಾರದು. ವಿದ್ಯೆಗೆ ಬಡವ–ಬಲ್ಲಿದ, ಎಂಬ ಬೇಧವಿಲ್ಲ. ಮಕ್ಕಳು ಉತ್ತಮ ಶಿಕ್ಷಣ ಪಡೆದು ದೇಶದ ಶ್ರೇಷ್ಠ ನಾಗರಿಕರಾಗಬೇಕು ಎಂದು ಬೆಂಗಳೂರಿನ ಉದ್ಯಮಿ ಹಾಗೂ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.1ರ ಹಳೆಯ ವಿದ್ಯಾರ್ಥಿ ರಾಜಕುಮಾರ ಅಗಡಿ ಅಭಿಪ್ರಾಯಪಟ್ಟರು.

ಅವರು ಪಟ್ಟಣದಲ್ಲಿ ಸುಮಾರು 60–65 ವರ್ಷಗಳ ಹಿಂದೆ ತಾವು ಪ್ರಾಥಮಿಕ ಶಿಕ್ಷಣ ಪಡೆದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.1ಕ್ಕೆ ಭೇಟಿ ನೀಡಿ ಅಲ್ಲಿನ ವಿದ್ಯಾರ್ಥಿಗಳೊಂದಿಗೆ ಮಾತುಕತೆ ನಡೆಸಿ ಶಾಲೆಯನ್ನು ಸಂಪೂರ್ಣವಾಗಿ ವೀಕ್ಷಿಸಿ ನಂತರ ಶಾಲೆಯ ವತಿಯಿಂದ ನೀಡಲಾದ ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದರು.



ತಾವು ವಿದ್ಯಾಭ್ಯಾಸ ಮಾಡುತ್ತಿದ್ದ ವೇಳೆ ಸೌಲಭ್ಯಗಳ ಕೊರತೆ, ಮನೆಯಲ್ಲಿ ಆರ್ಥಿಕ ಸಮಸ್ಯೆ, ಶೈಕ್ಷಣಿಕ ಸಮಸ್ಯೆ ಇತ್ಯಾದಿಗಳಿಂದ ಅನೇಕರು ಶಿಕ್ಷಣ ವಂಚಿತರಾಗುತ್ತಿದ್ದರು. ಆದರೆ ಇದೀಗ ಸೌಲಭ್ಯಗಳು ಸಾಕಷ್ಟು ದೊರೆಯುತ್ತಿದ್ದು ಅದರಂತೆ ಮಕ್ಕಳು ವಿದ್ಯಾಭ್ಯಾಸ ಮಾಡುವದಕ್ಕೆ ಆದ್ಯತೆ ನೀಡುವದು ಅವಶ್ಯವಾಗಿದೆ. ಪ್ರಾಥಮಿಕ ಶಾಲೆ ನಂ.1 ಈಗ ಸಾಕಷ್ಟು ಬದಲಾವಣೆಯಾಗಿದೆ, ವಿದ್ಯೆ ನೀಡಿದ ಗುರುವನ್ನು, ಕಲಿತ ಶಾಲೆಯನ್ನು ಎಂದಿಗೂ ಮರೆಯಬಾರದು ಎನ್ನುವ ನಿಟ್ಟಿನಲ್ಲಿ ಈ ಶಾಲೆಗೆ ಭೇಟಿ ನೀಡಿದ್ದು, ಮುಂದಿನ ದಿನಗಳಲ್ಲಿ ಈ ಶಾಲೆಗೆ ಅವಶ್ಯವಿರುವ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳುತ್ತೇನೆ. ನಾನು ಕಲಿತ ಶಾಲೆಯಲ್ಲಿಯೇ ನನಗೆ ಗೌರವ ದೊರೆತಿರುವದು ಹೆಮ್ಮೆಯಾಗಿದೆ ಎಂದು ಹೇಳಿದರು.

ಶಂಕರ ಬ್ಯಾಡಗಿ ಮಾತನಾಡಿ, 1872ರಲ್ಲಿ ಪ್ರಾರಂಭವಾದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.1 ಹಲವಾರು ಮಹನೀಯರ, ದಾನಿಗಳ ಸಹಕಾರದಿಂದ ಅನೇಕ ರೀತಿಯಲ್ಲಿ ಅಭಿವೃದ್ಧಿ ಹೊಂದಿದ್ದು, ಸುಮಾರು 6 ದಶಕಗಳ ಹಿಂದೆ ಕಲಿತ ಶಾಲೆಯ ಬಗ್ಗೆ ಅಭಿಮಾನದಿಂದ ಆಗಮಿಸಿದ ರಾಜಕುಮಾರ ಅಗಡಿ ಅಂತವರ ಸಹಕಾರ ಈ ಶಾಲೆಗೆ ದೊರಕಲಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಾಜಕುಮಾರ ಅವರ ಸಹೋದರಿ ಹಾಗೂ ಹಳೆಯ ವಿದ್ಯಾರ್ಥಿನಿ ಶುಭಾವತಿ, ಅವರ ಧರ್ಮಪತ್ನಿ, ಶೋಭಾ ಅಗಡಿ, ಕವಿತಾ ಮಂದನಾ, ಎಸ್‌ಡಿಎಂಸಿ ಅಧ್ಯಕ್ಷ ಯಲ್ಲಪ್ಪ ಶಿರಬಡಗಿ, ಎಂ.ಆರ್. ಪಾಟೀಲ, ದಿಗಂಬರ ಪೂಜಾರ, ಗಿರೀಶ ಅಗಡಿ, ಮುಖ್ಯೋಪಾಧ್ಯಾಯ ಡಿ.ಎನ್. ದೊಡ್ಡಮನಿ, ಶಿಕ್ಷಕರಾದ ಎಸ್ತೇರ್ ಪೀಟರ್, ರಾಜೇಶ್ವರಿ ಅಡರಕಟ್ಟಿ, ಸವಿತಾ ಬೋಮಲೆ, ಅಕ್ಷತಾ ಕಾಟೇಗಾರ, ಆಯೇಷಾ ನದಾಫ್, ಎಸ್.ಎಸ್. ಮಹಾಲಿಂಗಶೆಟ್ಟರ ಮುಂತಾದವರಿದ್ದರು.

# ಚಲನಚಿತ್ರಗಳ ಟ್ರೈಲರ್, ಟೀಸರ್ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಬಾಗಲಕೋಟ

ಇಲ್ಲಿನ ಐತಿಹಾಸಿಕ ಸ್ಥಳ ಐಹೊಳೆ ಹತ್ತಿರದ ಸುಕ್ಷೇತ್ರ ಕಲಾಪೋಷಕರ ಮಠ ಸಿದ್ಧನಕೊಳ್ಳದ ಸಿದ್ಧಶ್ರೀ ರಾಷ್ಟ್ರೀಯ ಉತ್ಸವ–2026 ಜ. 14ರಿಂದ 16ರವರೆಗೆ ಮೂರು ದಿನಗಳ ಕಾಲ ಜರುಗಲಿದ್ದು, ಜ.15ರಂದು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ನಡೆಯಲಿದೆ. ಹುನಗುಂದ ಕ್ಷೇತ್ರದ ಶಾಸಕರಾದ ಡಾ. ವಿಜಯಾನಂದ ಕಾಶಪ್ಪನವರ ಜಾತ್ರಾ ಸಮಿತಿ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಲಿದ್ದಾರೆ ಎಂದು ಧರ್ಮಾಧಿಕಾರಿಗಳಾದ ಡಾ. ಶಿವಕುಮಾರ ಸ್ವಾಮೀಜಿ ತಿಳಿಸಿದ್ದಾರೆ.

ಸಿದ್ಧಶ್ರೀ ಉತ್ಸವದಲ್ಲಿ ಸಹಸ್ರಾರು ಭಕ್ತರು ಸೇರುತ್ತಿದ್ದು, ಸಂಗೀತ, ನೃತ್ಯ, ಸಾಂಸ್ಕೃತಿಕ, ಮನರಂಜನಾ ಕಾರ್ಯಕ್ರಮಗಳು ನೆರವೇರುತ್ತವೆ. ರಾಜ್ಯ, ಹೊರರಾಜ್ಯಗಳ ವಿವಿಧ ಸಾಧಕರು, ಪ್ರತಿಭಾನ್ವಿತ, ಉದಯೋನ್ಮುಖ ಕಲಾ ಪ್ರತಿಭೆಗಳಿಗೂ ವೇದಿಕೆ ನೀಡಿ ಪ್ರೋತ್ಸಾಹಿಸಲಾಗುತ್ತಿದೆ. ಪ್ರತಿವರ್ಷದಂತೆ ಈ ವರ್ಷವೂ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವವನ್ನು ಜ.15ರಂದು ಹಮ್ಮಿಕೊಳ್ಳಲಾಗಿದೆ. ಚಲನಚಿತ್ರ ನಿರ್ಮಾಪಕರು, ನಿರ್ದೇಶಕರು, ಕಲಾವಿದರು ಇನ್ನೂ ಬಿಡುಗಡೆ–ಯಾಗದ ತಮ್ಮ 2025ರಲ್ಲಿ ನಿರ್ಮಾಣವಾದ, ಆಗುತ್ತಿರುವ ಹೊಸ ಚಲನಚಿತ್ರಗಳ, ಟೆಲಿಫಿಲ್ಮ್, ಕಿರುಚಿತ್ರಗಳ ಟ್ರೈಲರ್, ಟೀಸರ್ ಮತ್ತು ಪೋಸ್ಟರ್‌ಗಳನ್ನು ಚಿತ್ರೋತ್ಸವದಲ್ಲಿ ಬಿಡುಗಡೆ ಮಾಡಬಹುದು.

ಯಾವುದೇ ಪ್ರವೇಶ ಶುಲ್ಕಗಳಿಲ್ಲದೆ ಉಚಿತ ಅವಕಾಶ ಕಲ್ಪಿಸಲಾಗಿದೆ. ಭಾಗವಹಿಸಿದ ಚಲನಚಿತ್ರ ತಂಡಗಳಿಗೆ ಅಭಿನಂದನಾ ಪತ್ರ, ಸ್ಮರಣಿಕೆ, ಕಿರುಚಿತ್ರ ತಂಡಗಳಿಗೆ ಅಭಿನಂದನಾ ಪತ್ರಗಳನ್ನು ನೀಡಲಾಗುತ್ತದೆ. ಆಸಕ್ತರು ಡಿಸೆಂಬರ್ 31ರೊಳಗಾಗಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ನಂತರ ಬಂದವರಿಗೆ ಅವಕಾಶವಿಲ್ಲ. ಶ್ರೀಗಳ ಮತ್ತು ಆಯ್ಕೆ ಸಮಿತಿ ತೀರ್ಮಾನವೇ ಅಂತಿಮ. ಆಯ್ಕೆಯಾದವರಿಗೆ ನಂತರ ತಿಳಿಸಲಾಗುತ್ತದೆ. ತಮ್ಮ ಟೀಸರ್, ಟ್ರೈಲರ್, ಪೋಸ್ಟರ್‌ಗಳನ್ನು ಡಾ. ಪ್ರಭು ಗಂಜಿಹಾಳ–ವಾಟ್ಸಪ್ ನಂ–9448775346 ಇಲ್ಲಿಗೆ ಕಳಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಚಲನಚಿತ್ರೋತ್ಸವ ವಿಭಾಗದ ಡಾ. ಪ್ರಭು ಗಂಜಿಹಾಳ–ಮೊ–9448775346, ಡಾ. ವೀರೇಶ ಹಂಡಿಗಿ–ಮೊ–9060933596, ವೀರೇಶ ಐಹೊಳೆ–ಮೊ–7026062364, ಸಂಗನಗೌಡ್ರು ಕುರುಡಗಿ–ಮೊ–8861811128, ಲೋಕೇಶ ವಿದ್ಯಾಧರ ಮೊ–8762310399 ಇವರನ್ನು ಸಂಪರ್ಕಿಸಬಹುದು ಎಂದು ಶ್ರೀಗಳು ತಿಳಿಸಿದ್ದಾರೆ.

# ನೃತ್ಯ ಸ್ಪರ್ಧೆಯಲ್ಲಿ ಫಸ್ಟ್ ರನ್ನರ್–ಅಪ್

■ವಿಜಯಸಾಕ್ಷಿ ಸುದ್ದಿ, ಉಡುಪಿ

ಶ್ರದ್ಧಾ ಸ್ವರ ಸಂಗೀತ ವೆಲ್ಫೇರ್ ಟ್ರಸ್ಟ್ ಗದಗ ಇದರ ನೃತ್ಯ ತಂಡವು ಉಡುಪಿಯಲ್ಲಿ ನಡೆದ ಸೀಸನ್–8 ರಾಕ್ ಇಂಡಿಯಾ ಆಲ್ ಇಂಡಿಯಾ ಡ್ಯಾನ್ಸ್ ಚಾಂಪಿಯನ್‌ಶಿಪ್‌ಲ್ಲಿ ಫಸ್ಟ್ ರನ್ನರ್–ಅಪ್ ಸ್ಥಾನವನ್ನು ಪಡೆದು ಸಾಧನೆ ಮಾಡಿದೆ.

ದೇಶದ ವಿವಿಧ ರಾಜ್ಯಗಳಿಂದ ಭಾಗವಹಿಸಿದ್ದ ಅನೇಕ ನೃತ್ಯ ತಂಡಗಳ ನಡುವೆ ನಡೆದ ತೀವ್ರ ಸ್ಪರ್ಧೆಯಲ್ಲಿ, ಟ್ರಸ್ಟ್‌ನ ನೃತ್ಯ ತಂಡವು ತನ್ನ ಶಿಸ್ತುಬದ್ಧ ಪ್ರದರ್ಶನ, ಉನ್ನತ ಕಲಾತ್ಮಕತೆ ಹಾಗೂ ನವೀನ ನೃತ್ಯ ಸಂಯೋಜನೆಯ ಮೂಲಕ ತೀರ್ಪುಗಾರರ ವಿಶೇಷ ಮೆಚ್ಚುಗೆಗೆ ಪಾತ್ರವಾಗಿದೆ.




ನೃತ್ಯ ನಿರ್ದೇಶಕರಾದ ಸಂತೋಷ ಅಸುಂಡಿ ಅವರ ನೇತೃತ್ವದಲ್ಲಿ ನಡೆದ ಈ ಸ್ಪರ್ಧೆಯಲ್ಲಿ ಸಂತೋಷ ಅಸುಂಡಿ, ಚಿರಂಜೀವಿ ಜಿಂದೇ, ವಿಕಾಸ್ ಶೆಟ್ಟಿ, ಶಬ್ದ ಕಲಾಲ ಹಾಗೂ ಪ್ರಕುಲ್ ಲಕ್ಕುಂಡಿ ಭಾಗವಹಿಸಿದ್ದರು.

ಈ ಸಾಧನೆಗೆ ಸಂತಸ ವ್ಯಕ್ತಪಡಿಸಿದ ಟ್ರಸ್ಟ್‌ನ ಅಧ್ಯಕ್ಷ ಉಜ್ವಲ್ ಡಿ.ಕಬಾಡಿ, ಸಂಸ್ಥೆಯ ಎಲ್ಲಾ ಸಿಬ್ಬಂದಿ, ಮಕ್ಕಳು ಹಾಗೂ ಪಾಲಕರೊಂದಿಗೆ ಸೇರಿ ನೃತ್ಯ ತಂಡದ ಎಲ್ಲಾ ಕಲಾವಿದರಿಗೆ ಹಾರ್ದಿಕ ಅಭಿನಂದನೆಗಳನ್ನು ಸಲ್ಲಿಸಿ, ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಸಾಧನೆಗಳನ್ನು ಮಾಡುವ ವಿಶ್ವಾಸವನ್ನು ವ್ಯಕ್ತಪಡಿಸಿದರು.

# ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2021–22 ಮತ್ತು 2024–25ನೇ ಸಾಲಿನ ಶೇ 5% ಯೋಜನೆಯ ಅಂಗವಿಕಲರ ವಿಕಲಚೇತನರ ಫಲಾನುಭವಿಗಳಿಗೆ ಎಸ್.ಎಫ್.ಸಿ. ಮತ್ತು ನಗರಸಭೆ ಅನುದಾನದಡಿ ಕೆಳಗಿನ ಕಾರ್ಯಕ್ರಮಗಳಿಗೆ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

2021–22 ನೇ ಸಾಲಿನ ಶೇ 5 % ಯೋಜನೆಯಡಿಯಲ್ಲಿ ವಿಕಲಚೇತನರ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಸಹಾಯಧನಕ್ಕಾಗಿ ಹಾಗೂ 2024–25 ನೇ ಸಾಲಿನ ಶೇ 5 % ಯೋಜನೆಯಡಿಯಲ್ಲಿ ವಿಕಲಚೇತನರ ಕ್ರೀಡಾಪಟುಗಳಿಗೆ ಸಹಾಯಧನ ನೀಡುವದಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಡಿಸೆಂಬರ್ 29 ರೊಳಗೆ ಗದಗ ಬೆಟಗೇರಿ ನಗರಸಭೆ ಕಾರ್ಯಾಲಯಕ್ಕೆ ಸಲ್ಲಿಸಬಹುದಾಗಿದೆ. ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಗದಗ–ಬೆಟಗೇರಿ ನಗರಸಭೆ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

# 'ಕಲ್ಯಾಣ ದರ್ಶನ' ಪ್ರವಚನ ನಾಳೆಯಿಂದ

■ವಿಜಯಸಾಕ್ಷಿ ಸುದ್ದಿ, ರೋಣ

ಮಾರನಬಸರಿ ಗ್ರಾಮದ ಸರ್ವಧರ್ಮ ಸಮನ್ವಯ ಪೀಠದ ಶ್ರೀಗಳಾದ ಚನ್ನಬಸವ ಮಹಾಸ್ವಾಮಿಗಳ ಪುರ ಪ್ರವೇಶದ ಕಾರ್ಯಕ್ರಮದ ನಿಮಿತ್ತ ಡಿ. 25ರಿಂದ ಡಿ. 29ರವರೆಗೆ ಸರ್ವಧರ್ಮ ಸಮನ್ವಯ ಪೀಠದ ಸಭಾಂಗಣದಲ್ಲಿ 'ಕಲ್ಯಾಣ ದರ್ಶನ' ಪ್ರವಚನ ಕಾರ್ಯಕ್ರಮ ಜರುಗಲಿದೆ.

ಪ್ರವಚನ ಕಾರ್ಯಕ್ರಮವು ಐದು ದಿನಗಳ ಕಾಲ ಸಂಜೆ 6ರಿಂದ ಆರಂಭವಾಗಲಿದ್ದು, ಕಾರ್ಯಕ್ರಮವನ್ನು ಶಾಖಾ ಶಿವಯೋಗ ಮಂದಿರದ ಅಭಿನವ ಚನ್ನಬಸವ ಶ್ರೀಗಳು ಉದ್ಘಾಟಿಸಲಿದ್ದಾರೆ. ಸಾನ್ನಿಧ್ಯವನ್ನು ಶಿವಮೂರ್ತಿ ಶ್ರೀಗಳು ಹಿರೇಮಾಗಡಿ, ಚನ್ನವೀರ ಶ್ರೀಗಳು ವಿರಕ್ತಮಠ ಶಿಗ್ಲಿ ವಹಿಸಲಿದ್ದು, ಗವಿಶಿದ್ದೇಶ್ವರ ಶಾಸ್ತ್ರಿಗಳು ಪುರಾಣ ಪ್ರವಚನ ನಡೆಸಲಿದ್ದಾರೆ ಎಂದು ಸರ್ವಧರ್ಮ ಸಮನ್ವಯ ಪೀಠದ ಕಮಿಟಿ ಪ್ರಕಟಣೆ ತಿಳಿಸಿದೆ.

# ಹಂದಿಗಳ ನಿಯಂತ್ರಣಕ್ಕೆ ಮನವಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಆದರಳ್ಳಿ ಗ್ರಾಮದಲ್ಲಿ ಬೀಡಾಡಿ ದನ–ಕರುಗಳು ಹಾಗೂ ಹಂದಿಗಳಿಂದ ಸಂಖ್ಯೆ ಹೆಚ್ಚಾಗಿದ್ದು, ಇದರಿಂದ ಅನೇಕ ಸಮಸ್ಯೆಗಳು ಎದುರಾಗುತ್ತಿವೆ. ಇದರಿಂದ ಆದರಹಳ್ಳಿ ಗ್ರಾಮವನ್ನು ಮುಕ್ತಗೊಳಿಸಬೇಕು ಎಂದು ಅಲ್ಲಿನ ಕೆಲ ನಿವಾಸಿಗಳು ತಹಸೀಲ್ದಾರ ಧನಂಜಯ ಎಂ ಅವರಿಗೆ ಮಂಗಳವಾರ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಗ್ರಾಮದ ನಿವಾಸಿಗಳು, ತಾಲೂಕಿನ ಆದರಹಳ್ಳಿ ಗ್ರಾಮದಲ್ಲಿ 4–5 ವರ್ಷಗಳಿಂದ ದನ–ಕರುಗಳ ಸಂಖ್ಯೆ ಹೆಚ್ಚಾಗಿದೆ. ಅಲ್ಲದೆ ಗ್ರಾಮದಲ್ಲಿ ನೂರಾರು ಹಂದಿಗಳನ್ನು ತಂದು ಬಿಟ್ಟು ಹೋಗಿದ್ದಾರೆ. ಇದರಿಂದ ಅನೇಕ ಅವಘಡಗಳು ಸಂಭವಿಸುತ್ತಿದ್ದು, ದನಕರುಗಳನ್ನು ಬೀದಿಗೆ ಬಿಡುವದರಿಂದ ಹೊಲದಲ್ಲಿ ಬೆಳೆಗಳು ಹಾಳಾಗುತ್ತಿದೆ.

ಹಂದಿಗಳ ಕಾಟದಿಂದ ತಿಪ್ಪೆಗಳು ಹಾಗೂ ದನಕರುಗಳಿಗಾಗಿ ಸಂಗ್ರಹಿಸಿದ ಹೊಟ್ಟು, ಮೇವುಗಳ ಬಣವಿಗಳು ಹಾಳಾಗುತ್ತಿದೆ. ಈ ದನಕರುಗಳ ಮಾಲಕರಿಗೆ ಮತ್ತು ಹಂದಿ ಮಾಲಕರಿಗೆ ತಿಳಿಸಿ ಅವುಗಳನ್ನು ಬೇರೆಡೆ ಸಾಗಿಸುವಂತೆ ಕ್ರಮ ವಹಿಸಿ ಇವುಗಳ ಉಪಟಳವನ್ನು ತಡೆಯುಬೇಕು ಎಂದು ವಿನಂತಿಸಿದರು.

ಮನವಿ ಸ್ವೀಕರಿಸಿದ ತಹಸೀಲ್ದಾರರು ಅಗತ್ಯ ಕ್ರಮಗಳನ್ನು ಕೈಗೊಳ್ಳುವದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ತಿಪ್ಪಣ್ಣ ಲಮಾಣಿ, ಶಂಕರಗೌಡ ಪಾಟೀಲ, ಹನುಮಂತಗೌಡ ಪಾಟೀಲ, ಮಂಜಪ್ಪ ಹೆಸರೂರ, ನೀಲಪ್ಪ ತಳವಾರ, ಮಹಾಂತಗೌಡ ಪಾಟೀಲ, ಮಮ್ಮಿಸಾಬ ವಾಲಿಕಾರ, ಚನ್ನಪ್ಪ ಲಮಾಣಿ, ಮಂಜುನಾಥ ರಾಹೂತ್, ಗುಡದಪ್ಪ ಅಂಬಿಗೇರ, ಮಲ್ಲಿಕಸಾಬ ವಾಲಿಕಾರ ಮುಂತಾದವರಿದ್ದರು.


**ಶಿವಾನುಭವ ಕಾರ್ಯಕ್ರಮದಲ್ಲಿ ಪೂಜ್ಯ ಶಾಂತಲಿಂಗ ಮಹಾಸ್ವಾಮಿಗಳು**

# ವಚನಗಳು ಮಾನವ ಹಕ್ಕುಗಳನ್ನು ಪ್ರತಿಪಾದಿಸುತ್ತವೆ

■ವಿಜಯಸಾಕ್ಷಿ ಸುದ್ದಿ, ಗದಗ

ವಚನಗಳು ಕೇವಲ ಧಾರ್ಮಿಕ ಕಾವ್ಯವಲ್ಲ. ಸಮಾನತೆ, ಸ್ವಾತಂತ್ರ್ಯ, ನ್ಯಾಯ, ಮಾನವೀಯತೆ ಈ ನಾಲ್ಕು ಮಾನವ ಹಕ್ಕುಗಳ ಮೂಲತತ್ವಗಳನ್ನು ವಚನಗಳು 12ನೇ ಶತಮಾನದಲ್ಲಿಯೇ ಘೋಷಿಸಿತ್ತು. ಆದ್ದರಿಂದ ವಚನಗಳು ಭಾರತದ ಮೊದಲ ಮಾನವ ಹಕ್ಕುಗಳ ಸಂವಿಧಾನ ಎಂದು ಭೈರನಹಟ್ಟಿಯ ಪೂಜ್ಯ ಶ್ರೀ ಮ.ನಿ.ಪ್ರ ಶಾಂತಲಿಂಗ ಮಹಾಸ್ವಾಮಿಗಳು ನುಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2776ನೇ ಶಿವಾನುಭವದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ವರ್ಗ, ವರ್ಣ, ಲಿಂಗ ಭೇದ–ಭಾವ ಮಾಡದೇ ಮಾನವ ಹಕ್ಕುಗಳನ್ನು ಕೊಟ್ಟವರು ಶರಣರು. ತಮ್ಮ ವಚನಗಳ ಮೂಲಕ ಸಮಾನತೆಯ ಪರಿಕಲ್ಪನೆಯೇ ಅದ್ಭುತ. ಬಲಗೈ ಶ್ರೇಷ್ಠ, ಎಡಗೈ ಕೂಡ ಶ್ರೇಷ್ಠ ಎಂಬ ತತ್ವ ಸಾರಿ ದೇಶದಲ್ಲಿ ಮಾನವ ಹಕ್ಕು ಉಲ್ಲಂಘನೆ ಆಗುವುದನ್ನು ತಪ್ಪಿಸಿದರು. 26ಕ್ಕಿಂತಲೂ ಹೆಚ್ಚು ದೇಶಗಳು ಮಾನವ ಹಕ್ಕುಗಳನ್ನು ಒಪ್ಪಿಕೊಂಡಿವೆ. ಪ್ರತಿ ವಚನದ ಒಂದಾದರೂ ಸಾಲು ಮಾನವ ಹಕ್ಕುಗಳನ್ನು ಪ್ರತಿಪಾದಿಸುತ್ತವೆ ಎಂದು ತಿಳಿಸಿದರು.



ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಬೆಂಗಳೂರು ಹಿರಿಯ ನಾಗರಿಕರಿಗೆ ಕೊಡುವ ಗೌರವ ಡಾಕ್ಟರೇಟ್ ಮತ್ತು ರಾಜ್ಯ ಪ್ರಶಸ್ತಿಗೆ ಭಾಜನರಾದ ಡಾ. ಭೀಮರೆಡ್ಡಿ ದೇವರಡ್ಡಿ ಕಿಲಬನವರ ಅವರನ್ನು ಸನ್ಮಾನಿಸಲಾಯಿತು. ಆರಾಧ್ಯ ಕುನಾಲ್ ಅಳ್ಳೊಳ್ಳಿ ಇವರಿಂದ ಸಂಗೀತ ಸೇವೆ ನಡೆಯಿತು. ವಚನ ಸಂಗೀತ ಸೇವೆಯನ್ನು ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ನಡೆಸಿಕೊಟ್ಟರು. ಧರ್ಮಗ್ರಂಥ ಪಠಣವನ್ನು ಸೂರಜಗೌಡ ಜಿ.ಮರಿಗೌಡ್ರ ಹಾಗೂ ವಚನ ಚಿಂತನವನ್ನು ಕೃತಿಕಾ ಜಿ.ಮರಿಗೌಡ್ರ ನಿರ್ವಹಿಸಿದರು.

ಉಪನ್ಯಾಸಕರಾಗಿ ಆಗಮಿಸಿದ ಗದುಗಿನ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ವಚನಗಳಲ್ಲಿ ಮಾನವ ಹಕ್ಕುಗಳು ವಿಷಯ ಕುರಿತು ಮಾತನಾಡುತ್ತಾ, ಇದರ ಪರಿಕಲ್ಪನೆ ಆಕಾಶದಷ್ಟು ಅಗಲ, ಸಮುದ್ರದಷ್ಟು ಆಳ. ಶರಣರು 12ನೇ ಶತಮಾನದಲ್ಲಿಯೇ ಮಾನವ ಹಕ್ಕುಗಳ ಬಗ್ಗೆ ಧ್ವನಿ ಎತ್ತಿದರು. ಮಾನವನಿಗೆ ಗೌರವ ಇರಬೇಕು ಎಂದರು. ಸಮಾಜಕ್ಕೆ ಅದ್ಭುತವಾದ ಆಲೋಚನೆಗಳನ್ನು ಬಸವಣ್ಣನವರು ಕೊಟ್ಟರು. ಅನುಭವ ಲೌಕಿಕ, ಅನುಭಾವ ಅಧ್ಯಾತ್ಮಿಕ. ಮನಸ್ಥಿತಿ ಬದಲಾದರೆ ಪರಿಸ್ಥಿತಿ ಬದಲಾಗುತ್ತದೆ. ದಿನನಿತ್ಯದ ವ್ಯವಹಾರವೇ ಅನುಭಾವ. ಶರಣರ ಅನುಭಾವವನ್ನು ಪಡೆದುಕೊಳ್ಳಬೇಕಾದ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

ದಾಸೋಹ ಸೇವೆಯನ್ನು ರವೀಂದ್ರ ಸಂಗನಬಸಪ್ಪ ಗದಗ ಹಾಗೂ ಶರಣು ವಿರೂಪಾಕ್ಷಪ್ಪ ಗದಗ ಮತ್ತು ವೈಭವ ಗದಗ ವಹಿಸಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದ, ವಿದ್ಯಾ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹ ಕಾರ್ಯದರ್ಶಿ ಸೋಮಶೇಖರ ಪುರಾಣಿಕ, ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಸಹ ಚೇರಮನ್ ಶಿವಾನಂದ ಹೊಂಬಳ ಹಾಗೂ ಮಠದ ಭಕ್ತರು ಉಪಸ್ಥಿತರಿದ್ದರು.

ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ ಸ್ವಾಗತಿಸಿದರು. ವಿದ್ಯಾ ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

## ಶಾಲಾ ಕೊಠಡಿಗಳ ನಿರ್ಮಾಣಕ್ಕೆ ಭೂಮಿಪೂಜೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಉಳ್ಳಟ್ಟಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಅವರು ಶಾಲಾ ಕೊಠಡಿಗಳ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿದರು.

ಈ ವೇಳೆ ಮಾತನಾಡಿದ ಅವರು, ಕ್ಷೇತ್ರದಲ್ಲಿ ಶಾಲಾ ಕೊಠಡಿ, ಕಂಪೌಂಡ್, ಅಡುಗೆ ಕೋಣೆ, ಶೌಚಾಲಯಗಳ ನಿರ್ಮಾಣಕ್ಕೆ ಆದ್ಯತೆ ನೀಡಲಾಗಿದೆ. ಈಗಾಗಲೇ ಲಕ್ಷ್ಮೇಶ್ವರದ ಎರಡು ಶಾಲೆಗಳಲ್ಲಿ ಶೌಚಾಲಯಗಳನ್ನು ನಿರ್ಮಿಸಲಾಗುತ್ತಿದೆ. ಲಕ್ಷ್ಮೇಶ್ವರ ತಾಲೂಕಿನಲ್ಲಿ ಲೋಕೋಪಯೋಗಿ, ಜಿಲ್ಲಾ ಪಂಚಾಯತ್ ಮತ್ತು ಪ್ರಧಾನಮಂತ್ರಿ ಗ್ರಾಮ ಸಡಕ್ ಇಲಾಖೆಗಳಿಗೆ ಸಂಬಂಧಿಸಿದ ರಸ್ತೆಗಳು ಹಾಳಾಗಿದ್ದು, ಈ ಕುರಿತು ಈಗಾಗಲೇ ಸಂಬಂಧಿಸಿದ ಸಚಿವರಿಗೆ ಅನುದಾನ ನೀಡುವಂತೆ ಮನವಿ ಮಾಡಿಕೊಂಡಿದ್ದೇನೆ. ಅನುದಾನ ಬಂದ ಹಾಗೆ ಆದ್ಯತೆ ಮೇರೆಗೆ ರಸ್ತೆಗಳನ್ನು ನಿರ್ಮಿಸಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಚಂದ್ರು ಈಳಿಗೇರ, ಜಗದೀಶ ಹಂಚಿನಾಳ, ಕೃಷ್ಣ ಲಮಾಣಿ, ಶೇಖರಗೌಡ ಪಾಟೀಲ, ಪ್ರಕಾಶ ಬಾಳಿಕಾಯಿ, ರಮೇಶ ಇಟಗಿ, ಗಂಗಾಧರ ಮೆಣಸಿನಕಾಯಿ, ಶಿವು ಕರಡಿ, ಎಲ್.ಪಿ. ಲಮಾಣಿ, ಶಂಕರ ಲಮಾಣಿ, ರಾಯಪ್ಪ ಹಂಚಿನಾಳ, ಅಶೋಕ ಶಿರಹಟ್ಟಿ ಮತ್ತಿತರರು ಇದ್ದರು.

**ನಕಲಿ, ವಸೂಲಿ ಪತ್ರಕರ್ತರ ಬಗ್ಗೆ ಜಾಗೃತಿ ಮೂಡಿಸುವ ಅಗತ್ಯವಿದೆ; ಜಿಲ್ಲಾಧಿಕಾರಿ ದಿವ್ಯ ಪ್ರಭು**

# ಪ್ರಜಾಪ್ರಭುತ್ವದ ನಾಲ್ಕನೇ ಅಂಗ ಮಾಧ್ಯಮ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಕಾರ್ಯಾಂಗ, ಶಾಸಕಾಂಗ ಮತ್ತು ನ್ಯಾಯಾಂಗ ಎಂಬ ಅಂಗಗಳು ಸಂವಿಧಾನದಲ್ಲಿವೆ. ಪ್ರಜಾಪ್ರಭುತ್ವದ 4ನೇ ಅಂಗವೆಂದು ಮಾಧ್ಯಮವನ್ನು ಗುರುತಿಸಲಾಗಿದೆ. ಅಧಿಕೃತ ಪತ್ರಕರ್ತರನ್ನು ಗುರುತಿಸಿ, ಗೌರವಿಸಲು ಸಹಾಯವಾಗುವುದಕ್ಕಾಗಿ ನಕಲಿ, ವಸೂಲಿ ಪತ್ರಕರ್ತರ ಬಗ್ಗೆ ಜಾಗೃತಿ ಮೂಡಿಸುವ ಅಗತ್ಯವಿದೆ. ಸರ್ಕಾರಿ ನೌಕರರಲ್ಲಿ ಮಾಧ್ಯಮಗಳ ಮತ್ತು ಮಾಧ್ಯಮ ಪ್ರತಿನಿಧಿಗಳ ಬಗ್ಗೆ ತಿಳುವಳಿಕೆ ಮೂಡಿಸಲು ಮುಂದಿನ ದಿನಗಳಲ್ಲಿ ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ಸರ್ಕಾರಿ ನೌಕರರಿಗೆ ಮಾಧ್ಯಮ ಕಾರ್ಯಾಗಾರ ಆಯೋಜಿಸಲಾಗುವುದು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಮಂಗಳವಾರ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಧಾರವಾಡ ಜಿಲ್ಲಾ ಘಟಕದ 2025-28ನೇ ಅವಧಿಯ ನೂತನ ಪದಾಧಿಕಾರಿಗಳಿಗೆ ಹಾಗೂ ಕಾರ್ಯಕಾರಿಣಿ ಸದಸ್ಯರಿಗೆ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ, ಮಾತನಾಡಿದರು.




ಸರ್ಕಾರದ ವಿವಿಧ ಇಲಾಖೆಗಳಿಗೆ ಮಾಧ್ಯಮದ ಹೆಸರಿನಲ್ಲಿ ಇತರರು ಭೇಟಿ ನೀಡಿ, ಮಾಹಿತಿ ಕೇಳುವ ಅಥವಾ ಅಧಿಕಾರಿ, ಸಿಬ್ಬಂದಿಗಳಿಗೆ ಮಾಹಿತಿ ಹೆಸರಿನಲ್ಲಿ ಹೆದರಿಸುವ, ಹಣ ಕೇಳುವ ಘಟನೆಗಳು ಜರಗುತ್ತವೆ. ಬೇರೆ ಜಿಲ್ಲೆಗಳಿಗೆ ಹೋಲಿಸಿದಾಗ ಧಾರವಾಡ ಜಿಲ್ಲೆಯಲ್ಲಿ ಇಂತಹ ಪ್ರಕರಣಗಳ ಸಂಖ್ಯೆ ಕಡಿಮೆ. ಆದರೂ ಅಧಿಕೃತ ಪತ್ರಕರ್ತರಿಗೆ ವೃತ್ತಿ ದೃಷ್ಟಿಯಿಂದ ಸಿಗಬೇಕಾದ ಮಾಹಿತಿ ಮತ್ತು ಗೌರವ ನೀಡಲು ಅಧಿಕಾರಿ, ಸಿಬ್ಬಂದಿಗಳಿಗೆ ಮಾಧ್ಯಮದ ಕಾರ್ಯ ಚಟುವಟಿಕೆಗಳ ಕುರಿತು ಮತ್ತು ಮಾಧ್ಯಮ ಪ್ರತಿನಿಧಿಗಳ ಬಗ್ಗೆ ತಿಳಿಸುವ ಅಗತ್ಯವಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಮಾತನಾಡಿ, ಸರ್ಕಾರದ ಯೋಜನೆ, ಬಜೆಟ್ ಸೇರಿದಂತೆ ವಿವಿಧ ವಿಷಯಗಳನ್ನು ಸಾರ್ವಜನಿಕರಿಗೆ ಮುಟ್ಟಿಸುವ ಮಹತ್ತರ ಜವಾಬ್ದಾರಿ ಮಾಧ್ಯಮಗಳ ಮೇಲಿದೆ. ದೇಶದ ನಾಗರಿಕರಿಗೆ ಸಿಗುವ ಅವಕಾಶಗಳ ಬಗ್ಗೆ ತಿಳಿಯುಪಡಿಸಲಾಗುವುದು. ಪ್ರಜಾಪ್ರಭುತ್ವದಲ್ಲಿ ಮಾಧ್ಯಮಕ್ಕೆ ತನ್ನದೇ ಘನತೆ, ಸ್ಥಾನವಿದೆ. ಕೆಲವು ಸ್ವಾತಂತ್ರ್ಯ ಹೋರಾಟದ ನಾಯಕರು ಲೇಖನಿ ಮತ್ತು ಪತ್ರಿಕೆಗಳ ಮೂಲಕ ಸ್ವಾತಂತ್ರ್ಯ ಹೋರಾಟಕ್ಕೆ ಕೊಡುಗೆ ನೀಡಿದ್ದಾರೆ. ಹೊಸ ಹೊಸ ತಂತ್ರಜ್ಞಾನದ ಬಳಕೆ ಬಗ್ಗೆ ಅರಿತುಕೊಳ್ಳಬೇಕಿದೆ ಎಂದು ತಿಳಿಸಿದರು.

ಪತ್ರಕರ್ತರ ಸಂಘ ಧಾರವಾಡ ಜಿಲ್ಲಾ ಘಟಕದ ಅಧ್ಯಕ್ಷ ಬಂಡು ಕುಲಕರ್ಣಿ, ಸಂಯುಕ್ತ ಕರ್ನಾಟಕ ದಿನಪತ್ರಿಕೆಯ ಸ್ಥಾನಿಕ ಸಂಪಾದಕರಾದ ಮೋಹನ ಹೆಗಡೆ, ಕನ್ನಡಪ್ರಭ ಪತ್ರಿಕೆಯ ಸ್ಥಾನಿಕ ಸಂಪಾದಕ ಮಲ್ಲಿಕಾರ್ಜುನ ಸಿದ್ದಣ್ಣನವರ ಮಾತನಾಡಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಸ್ವಾಗತಿಸಿ, ಮಾತನಾಡಿದರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಭಾರ ಸಹಾಯಕ ನಿರ್ದೇಶಕ ಡಾ. ಸುರೇಶ ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕರ್ನಾಟಕ ಮಾಧ್ಯಮ ಅಕಾಡೆಮಿಯ ಸದಸ್ಯ ಜೆ.ಅಬ್ಬಾಸ್ ಮುಲ್ಲಾ, ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಗುರು ಭಾಂಡಗೆ, ಡೆಕ್ಕನ್ ಹೆರಾಲ್ಡ್ ಪತ್ರಿಕೆಯ ಬ್ಯೂರೋ ಮುಖ್ಯಸ್ಥ ವೆಂಕಟರಾಜು ಕೆ.ಜಿ., ವಿಜಯವಾಣಿ ದಿನಪತ್ರಿಕೆಯ ಸ್ಥಾನಿಕ ಸಂಪಾದಕ ಪ್ರಕಾಶ ಶೇಟ್ ವೇದಿಕೆಯಲ್ಲಿ ಇದ್ದರು.

ಕಾರ್ಯಕ್ರಮದಲ್ಲಿ ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಕೆ.ಸಿ. ಭದ್ರಣ್ಣವರ, ಮೀನುಗಾರಿಕೆ ಇಲಾಖೆಯ ಉಪನಿರ್ದೇಶಕ ಶ್ರೀಪಾದ ಕುಲಕರ್ಣಿ, ಜಿ.ಪಂ ಮುಖ್ಯ ಯೋಜನಾಧಿಕಾರಿ ದೀಪಕ ಮಡಿವಾಳರ ಸೇರಿದಂತೆ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಮತ್ತು ವಿವಿಧ ಪತ್ರಿಕೆಗಳ ಸ್ಥಾನಿಕ ಸಂಪಾದಕರಾದ ವಿಠ್ಠಲದಾಸ್ ಕಾಮತ್, ಷಣ್ಮುಖ ಕೋಳಿವಾಡ, ಗಿರೀಶ ಪಟ್ಟಣಶೆಟ್ಟಿ, ವೆಂಕಟೇಶ ಪ್ರಭು, ರಾಹುಲ ಬೆಳಗಲಿ ಹಾಗೂ ಮುದ್ರಣ ಮತ್ತು ವಿದ್ಯುನ್ಮಾನ ಮಾಧ್ಯಮಗಳ ಪ್ರತಿನಿಧಿಗಳು, ಧಾರವಾಡ ಪತ್ರಕರ್ತರು ಭಾಗವಹಿಸಿದ್ದರು. ವಾರ್ತಾ ಇಲಾಖೆಯ ಸಿಬ್ಬಂದಿ ಕಾವ್ಯಾ ಗೌಡರ ಪ್ರಾರ್ಥಿಸಿದರು. ರವಿ ಕುಲಕರ್ಣಿ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

# ಮಕ್ಕಳ ಪ್ರತಿಭೆ ಗುರುತಿಸಿ, ಪ್ರೋತ್ಸಾಹಿಸಿ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಮಕ್ಕಳ ಕಲಿಕೆಯ ಜೊತೆಯಲ್ಲಿ ಅವರಲ್ಲಿ ಅಡಗಿರುವ ಕಲಾ ಪ್ರತಿಭೆಯನ್ನು ಪ್ರತಿಯೊಬ್ಬರೂ ಗುರುತಿಸಿ ಪ್ರೋತ್ಸಾಹಿಸಿದಾಗ ಮಕ್ಕಳ ಪ್ರತಿಭೆಯನ್ನು ಹೊರಹಾಕಲು ಸಹಕಾರಿಯಾಗುತ್ತದೆ ಎಂದು ಹೊಸಳ್ಳಿ ಜಗದ್ಗುರು ಬೂದೀಶ್ವರ ವಿದ್ಯಾಪೀಠದ ಬೂದೀಶ್ವರ ಮಾಹಾಸ್ವಾಮೀಜಿ ಹೇಳಿದರು.

ಅವರು ಸಮೀಪದ ಹೊಸಳ್ಳಿ ಬೂದೀಶ್ವರ ವಿದ್ಯಾಪೀಠದಲ್ಲಿ ಅಂತೂರ-ಬೆಂತೂರ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲಿಕೋತ್ಸವ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಗ್ರಾಮೀಣ ಭಾಗದ ಮಕ್ಕಳಲ್ಲಿ ಸಾಕಷ್ಟು ಕಲೆ, ಸಾಹಿತ್ಯ, ಸಂಗೀತ ಅಡಕವಾಗಿರುತ್ತವೆ. ಅವುಗಳನ್ನು ಪಾಲಕರು, ಪೋಷಕರು, ಶಿಕ್ಷಕರು ಗುರುತಿಸಿ ಪ್ರೋತ್ಸಾಹಿಸಿದಾಗ ಮಕ್ಕಳು ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಗುರುತಿಸಲು ಸಾಧ್ಯವಾಗುತ್ತದೆ. ಇದರಿಂದ ಮಕ್ಕಳ ಭವಿಷ್ಯಕ್ಕೆ ಸಹಕಾರಿಯಾಗುವುದು ಎಂದರು. ಗದಗ ಡಿಡಿಪಿಐ ಆರ್.ಎಸ್. ಬುರಡಿ ಮಾತನಾಡಿ, ಪ್ರತಿಯೊಂದು ಮಗುವಿನಲ್ಲಿ ಪ್ರತಿಭೆ ಅಡಕವಾಗುರುತ್ತದೆ. ಅವುಗಳನ್ನು ಹೊರಹಾಕಲು ಈ ಪ್ರತಿಭಾ ಕಾರಂಜಿ ಹಾಗೂ ಕಲಿಕೋತ್ಸವ ಸಹಕಾರಿಯಾಗಿದ್ದು, ಪಠ್ಯದ ಜೊತೆಯಲ್ಲಿ ಇದು ಪಠ್ಯೇತರ ಚಟುವಟಿಕೆ ಆಗಿರುವುದರಿಂದ ಈ ಕಾರ್ಯಕ್ರಮ ಸದುಪಯೋಗ ಮಾಡಿಕೊಂಡಲ್ಲಿ ಮಾತ್ರ ಮಕ್ಕಳ ಬೆಳವಣಿಗೆ ಸಾಧ್ಯ ಎಂದರು.




ಗದಗ ಗ್ರಾಮೀಣ ಬಿಇಓ ವಿ.ವಿ. ನಡುವಿನಮನಿ ಮಾತನಾಡಿ, ಪಾಲಕರು ಕೇವಲ ಮಕ್ಕಳ ಪಠ್ಯಕ್ಕೆ ಹೆಚ್ಚು ಗಮನ ಹರಿಸದೆ, ಅದರ ಜೊತೆಯಲ್ಲಿ ಅವರಲ್ಲಿ ಅಡಕವಾಗಿರುವ ಪ್ರತಿಭೆಗಳನ್ನು ಶಿಕ್ಷಕರ ಜೊತೆಯಲ್ಲಿ ಹಂಚಿಕೊಂಡಾಗ ಮಕ್ಕಳಿಗೆ ಸೂಕ್ತವಾದ ತರಬೇತಿ ನೀಡಿ ಬೆಳೆಸಲು ಸಹಕಾರಿಯಾಗುತ್ತದೆ ಎಂದರು. ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಶಂಕರ ಹಡಗಲಿ, ಜಿಲ್ಲಾ ನೌಕರ ಸಂಘದ ಗೌರವಾಧ್ಯಕ್ಷ ಡಿ.ಎಸ್. ತಳವಾರ, ಶಿವಕುಮಾರ ಶೆಟ್ಟರ, ಸಿಆರ್‌ಪಿ ಡಿ.ಸಿ. ನದಾಫ್, ಪ್ರಧಾನ ಗುರು ಶಿವಾನಂದ ದೂಳಪ್ಪನವರ, ಟಿ.ವಿ. ರೋಣ ಸೇರಿದಂತೆ ಅಂತೂರ ಬೆಂತೂರ ಕ್ಲಸ್ಟರ್ ಶಾಲಾ ಶಿಕ್ಷಕರು ಹಾಗೂ ಮಕ್ಕಳು ಭಾಗಿಯಾಗಿದ್ದರು.

# ವಿಶ್ವ ಮಾನವ ದಿನಾಚರಣೆ ಅರ್ಥಪೂರ್ಣವಾಗಿರಲಿ

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಷ್ಟ್ರಕವಿ ಕುವೆಂಪು ಅವರ ಜನ್ಮದಿನದ ನಿಮಿತ್ತ ವಿಶ್ವ ಮಾನವ ದಿನಾಚರಣೆಯನ್ನು ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಡಿಸೆಂಬರ್ 29ರಂದು ಬೆಳಿಗ್ಗೆ 11 ಗಂಟೆಗೆ ಅರ್ಥಪೂರ್ಣವಾಗಿ ಹಾಗೂ ಅಚ್ಚುಕಟ್ಟಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಮಂಗಳವಾರ ರಾಷ್ಟ್ರಕವಿ ಕುವೆಂಪು ಜನ್ಮದಿನದ ನಿಮಿತ್ತ ವಿಶ್ವ ಮಾನವ ದಿನಾಚರಣೆ ಕುರಿತು ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಹೆಚ್ಚಿನ ಸಂಖ್ಯೆಯಲ್ಲಿ ಕನ್ನಡಾಭಿಮಾನಿಗಳು, ಸಾಹಿತ್ಯಾಸಕ್ತರು, ಬರಹಗಾರರು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡು ದಿನಾಚರಣೆಗೆ ಶೋಭೆ ತರಬೇಕು. ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಕನ್ನಡದಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಹಾಗೂ ಹಿರಿಯ, ಕಿರಿಯ ಹಾಗೂ ಮಹಿಳಾ ಬರಹಗಾರರನ್ನು ಸನ್ಮಾನಿಸುವ ಕಾರ್ಯಕ್ರಮ ಈ ಸಂದರ್ಭದಲ್ಲಿ ಜರುಗಲಿದೆ. ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಬೇಕು. ರಾಷ್ಟ್ರಕವಿ ಕುವೆಂಪು ಅವರ ಕುರಿತು ಆಳವಾಗಿ ಅಧ್ಯಯನ ಮಾಡಿದವರಿಂದ ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಬೇಕು. ಒಟ್ಟಾರೆಯಾಗಿ ವಿಶ್ವ ಮಾನವ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಬೇಕೆಂದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸ್ವಾಗತಿಸಿ ವಂದಿಸಿದರು. ಈ ಸಂದರ್ಭದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು, ಸಾಹಿತಿಗಳು, ಬರಹಗಾರರು ಹಾಜರಿದ್ದರು.

# ಇಂದು ರಾಷ್ಟ್ರೀಯ ಗ್ರಾಹಕರ ದಿನಾಚರಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ , ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ, ವಾರ್ತಾ ಮತ್ತು ಪ್ರಚಾರ ಇಲಾಖೆ ಹಾಗೂ ವಿ.ಆರ್.ಕುಷ್ಟಗಿ ಮೆಮೋರಿಯಲ್ ಕಾಲೇಜ್ ಆಫ್ ಕಾಮರ್ಸ್ , ಗದಗ-ಬೆಟಗೇರಿ ಇವರ ಸಂಯುಕ್ತಾಶ್ರಯದಲ್ಲಿ " ರಾಷ್ಟ್ರೀಯ ಗ್ರಾಹಕರ ದಿನಾಚರಣೆ " -2025 ನ್ನು ಡಿಸೆಂಬರ್ 24 ರಂದು ಮಧ್ಯಾಹ್ನ 12.30 ಗಂಟೆಗೆ ಗದಗ-ಬೆಟಗೇರಿಯ ವಿ.ಆರ್.ಕುಷ್ಟಗಿ ಮೆಮೋರಿಯಲ್ ಕಾಲೇಜ್ ಆಫ್ ಕಾಮರ್ಸ್ ಆವರಣದ ಸುವರ್ಣ ಮಹೋತ್ಸವ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿ.ಎನ್.ಶ್ರೀಧರ್ ಉದ್ಘಾಟಿಸುವರು. ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಎ.ಜೆ. ಮಾಲ್ದಾರ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್.ಶಿವನಗೌಡ್ರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್, ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರರಾದ ಎಸ್.ಜಿ.ಪಲ್ಲೇದ , ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಆರ್.ಜಿ.ಕಲ್ಲೂರ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಮಹಿಳಾ ಸದಸ್ಯರಾದ ಶ್ರೀಮತಿ ಯಶೋಧ ಪಾಟೀಲ, ಆದರ್ಶ ಶಿಕ್ಷಣ ಸಮಿತಿ ಅಧ್ಯಕ್ಷ ಕೆ.ವಿ.ಕುಷ್ಟಗಿ, ಆದರ್ಶ ಶಿಕ್ಷಣ ಸಮಿತಿ ಚೇರ್‌ಮನ್ ಹಿರಿಯ ಲೆಕ್ಕ ಪರಿಶೋಧಕ ಎ.ಎಲ್.ಪೋತ್ನೀಸ್, ಆದರ್ಶ ಶಿಕ್ಷಣ ಸಮಿತಿಯ ಕಾರ್ಯದರ್ಶಿ ಎ.ಡಿ.ಗೋಡಖಿಂಡಿ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಶ್ರೀ ವಿ.ಆರ್.ಕುಷ್ಟಗಿ ಮೆಮೋರಿಯಲ್ ಕಾಲೇಜ್ ಆಫ್ ಕಾಮರ್ಸ್ ದ ಪ್ರಾಂಶುಪಾಲರಾದ ಡಾ.ವಿ.ಟಿ.ನಾಯ್ಕರ್ , ಡಿ.ಎಸ್.ಕುರ್ತಕೋಟಿ ಮೆಮೋರಿಯಲ್ ಪಿಯು ಕಾಲೇಜ್ ಆಫ್ ಕಾಮರ್ಸ್ ಆದರ್ಶ ಶಿಕ್ಷಣ ಸಮಿತಿ ಪ್ರಾಂಶುಪಾಲರಾದ ಆರ್. ಆರ್.ಕುಲಕರ್ಣಿ, ಎಲ್.ಎ.ಪೋತ್ನೀಸ್ ಮೆಮೋರಿಯಲ್ ಕಾಲೇಜ್ ಆಫ್ ಬಿ.ಬಿ.ಎ/ಬಿ.ಸಿ.ಎ ಆದರ್ಶ ಶಿಕ್ಷಣ ಸಮಿತಿ ಪ್ರಾಂಶುಪಾಲರಾದ ಎಲ್. ಎಸ್.ರೇಶ್ಮಿ ಆಗಮಿಸುವರು.

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾದಿಕಾರದ ಜಿಲ್ಲಾ ಅಂಕಿತ ಅಧಿಕಾರಿ ಹಾಗೂ ಉಪವಿಭಾಗಾಧಿಕಾರಿ ಎಮ್.ಗಂಗಪ್ಪ, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಉಪನಿರ್ದೇಶಕರಾದ ಎಮ್.ಎಸ್. ರಮೇಶ, ಕಾನೂನು ಮಾಪನ ಶಾಸ್ತ್ರ ಇಲಾಖೆಯ ಸಹಾಯಕ ನಿಯಂತ್ರಕ ( ಗ್ರೇಡ್-2) ಶ್ರೀಮತಿ ಆರ್.ಎಸ್.ಪಟ್ಟಣಶೆಟ್ಟಿ ಸ್ವಾಗತ ಕೋರಿದ್ದಾರೆ.

# ಸ್ಕೌಟ್ಸ್-ಗೈಡ್ಸ್ ಜಾಂಬೋರೇಟ್ ಕಾರ್ಯಕ್ರಮಕ್ಕೆ ಖಡಕ್ ರೊಟ್ಟಿ ರವಾನೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬೆಳಗಾವಿ ಜಿಲ್ಲೆಯ ಹೊನಗಾದ ಫೀನಿಕ್ಸ್ ಪಬ್ಲಿಕ್ ಶಾಲೆಯಲ್ಲಿ ಡಿಸೆಂಬರ್ 27ರಿಂದ ಜನವರಿ 1ರವರೆಗೆ 5 ದಿನಗಳ ಕಾಲ ನಡೆಯಲಿರುವ 29ನೇ ಕರ್ನಾಟಕ ರಾಜ್ಯ ಸ್ಕೌಟ್ಸ್-ಗೈಡ್ಸ್ ಜಾಂಬೋರೇಟ್ ಕಾರ್ಯಕ್ರಮಕ್ಕೆ ಮಂಗಳವಾರ ಪಟ್ಟಣದ ಸರಕಾರಿ ಮಾದರಿ ಹೆಣ್ಣುಮಕ್ಕಳ ಶಾಲೆಯ ಆವರಣದಿಂದ ಖಡಕ್ ರೊಟ್ಟಿಗಳನ್ನು ರವಾನಿಸಲಾಯಿತು.

ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕುಗಳಲ್ಲಿ ಸಿದ್ಧಗೊಂಡ ಸುಮಾರು 15 ಸಾವಿರಕ್ಕೂ ಅಧಿಕ ರೊಟ್ಟಿ ಹಾಗೂ ಚಟ್ನಿಪುಡಿಯನ್ನು ವಾಹನದ ಮೂಲಕ ರವಾನಿಸುವ ಕಾರ್ಯಕ್ಕೆ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ನಾಣಕೀ ನಾಯ್ಕ್ ಚಾಲನೆ ನೀಡಿ ಮಾತನಾಡಿ, ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕುಗಳ ಎಲ್ಲ ಶಾಲೆಗಳ ಪ್ರಧಾನ ಗುರುಗಳು, ಶಿಕ್ಷಕರು ವಿಶೇಷ ಆದ್ಯತೆ ನೀಡಿ 15 ಸಾವಿರಕ್ಕೂ ಅಧಿಕ ರೊಟ್ಟಿಗಳನ್ನು ಸಿದ್ಧಪಡಿಸಿ ನೀಡಿದ್ದು, ಈ ಜಾಂಬೋರೇಟ್ ಕಾರ್ಯಕ್ರಮದಲ್ಲಿ ಭಾಗವಹಿಸುವ ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳಿಗೆ ಭೋಜನದ ಭಾಗವಾಗಿ ನಮ್ಮ ತಾಲೂಕಿನಿಂದ ರೊಟ್ಟಿಗಳನ್ನು ಉಚಿತವಾಗಿ ಕಳುಹಿಸುವ ಮೂಲಕ ನಮ್ಮ ತಾಲೂಕಿನಿಂದ ಅಲ್ಪ ಕೊಡುಗೆ ನೀಡಲು ಮುಂದಾಗಿರುವ ಸಹಕಾರವನ್ನು ಸ್ಮರಿಸುವದಾಗಿ ಹೇಳಿದರು.

ಇದೇ ಸಂದರ್ಭದಲ್ಲಿ ಭಾರತ ಸ್ಕೌಟ್ಸ್ ಅಂಡ್ ಗೈಡ್ಸ್ ಲಕ್ಷ್ಮೇಶ್ವರ ತಾಲೂಕು ಕಾರ್ಯದರ್ಶಿ ಕೆ.ಆರ್. ಲಮಾಣಿ, ಪ್ರಧಾನ ಗುರುಗಳಾದ ಬಸವರಾಜ ಕುಂಬಾರ, ಎಚ್.ಬಿ. ಸಣ್ಣಮನಿ, ಕ.ರಾ.ಪ್ರಾ ಶಾಲಾ ಶಿಕ್ಷಕರ ಸಂಘದ ಉಪಾಧ್ಯಕ್ಷ ಡಿ.ಡಿ. ಲಮಾಣಿ, ಬಿಆರ್‌ಪಿ ಬಿ.ಎಮ್. ಯರಗುಪ್ಪಿ, ಸಿಆರ್‌ಪಿ ಶ್ರೀನಿವಾಸ್ ಮತ್ತೂರ, ಆರ್.ಎಮ್. ಶಿರಹಟ್ಟಿ, ಶಿವಾನಂದ ಚಕ್ರಸಾಲಿ, ಪಿ.ಸಿ. ಕಾಳಶೆಟ್ಟಿ, ಆರ್. ಕೆ. ಉಪನಾಳ ಹಾಗೂ ಗೊಲ್ಲರ ಹಾಜರಿದ್ದರು.

**ಕರ್ನಾಟಕ ಸರ್ಕಾರ**

**ಜಿಲ್ಲಾ ಪಂಚಾಯತ ಗದಗ, ತಾಲೂಕ ಪಂಚಾಯತ ಲಕ್ಷ್ಮೇಶ್ವರ**

**ಗ್ರಾಮ ಪಂಚಾಯತ ಕಾರ್ಯಾಲಯ ದೊಡ್ಡೂರ ತಾಲೂಕ ॥ ಲಕ್ಷ್ಮೇಶ್ವರ, ಜಿಲ್ಲಾ ॥ ಗದಗ**

ಕ್ರ.ಸಂ:ಗ್ರಾ.ಪಂ./ದೊಡ್ಡೂರ/ನರೇಗಾ/ದ.ಪ.ಪ್ರ/2025-26 ದಿನಾಂಕ : 22-12-2025

**ದರಪಟ್ಟಿ ಪ್ರಕಟಣೆ**

2025-2026 ನೇ ಸಾಲಿನ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಅನುಷ್ಠಾನಗೊಳ್ಳುವ ಈ ಕೆಳಕಂಡ ಕಾಮಗಾರಿಗಳಿಗೆ ವಿವಿಧ ರೀತಿಯ ಅಂದಾಜು ಸಾಮಗ್ರಿಗಳನ್ನು ಸಂಗ್ರಹಿಸುವ ಸಂಬಂಧ ದರಪಟ್ಟಿ ಆಹ್ವಾನಿಸಲಾಗಿದೆ. ಇದರ ಪ್ರಯುಕ್ತ ಜಿಲ್ಲಾ ಡಿ.ಪಿ.ಸಿ ಲಾಗಿನ್‌ನಲ್ಲಿ ನೊಂದಾಯಿತ ಆಸಕ್ತ ಸರಬರಾಜುದಾರರು ದರಪಟ್ಟಿಯನ್ನು ಸಲ್ಲಿಸಬಹುದಾಗಿದ್ದು ವಿವರ ಮತ್ತು ವೇಳಾಪಟ್ಟಿ ಈ ಕೆಳಗಿನಂತಿದೆ.

| ಕ್ರ ಸಂ | ಕಾಮಗಾರಿಯ ಹೆಸರು | ಕಾಮಗಾರಿಯ ಅಂದಾಜು ಮೊತ್ತ | ಕಾಮಗಾರಿಗಳಿಗೆ ಪೂರೈಸಬೇಕಾದ ಸಾಮಗ್ರಿ ಮೊತ್ತ |
|---|---|---|---|
| 01 | 1514005008-25-891 ದೊಡ್ಡೂರ ಗ್ರಾಮದ ದೇವಣ್ಣ ತೋಟದ ರವರ ಮನೆಯ ಹತ್ತಿರ ಸಿ ಡಿ ನಿರ್ಮಾಣ (1514005008/FP/93393042892376876) | 92000 | 69000 |
| 02 | 1514005008-24-705 ದೊಡ್ಡೂರ ಗ್ರಾಮದ ಕಾಳಪ್ಪ ಬಂಕಾಪೂರ ಇವರ ಹೊಲದಿಂದ ಚನ್ನಪ್ಪ ಬಾಗಲದ ಇವರ ಹೊಲದವರೆಗೆ ಮೋರಂ ರಸ್ತೆ (1514005008/RC/93393042892514447) | 184000 | 46000 |
| 03 | 514005008-24-740 ಶ್ಯಾಬಳ ಗ್ರಾಮದ ಗ್ರಾಮ ಕೇಂದ್ರದಿಂದ ಮೇನ್ ರಸ್ತೆ ವರೆಗೆ ಸಿ ಸಿ ರಸ್ತೆ ನಿರ್ಮಾಣ (1514005008/RC/93393042892515296) | 92000 | 73600 |
| 04 | 1514005008-24-726 ಮು.ಗ್ರಾ ಚಂದ್ರಪ್ಪ ಶಿವಪ್ಪ ಲಮಾಣಿ ಮನೆ ರತ್ನವ್ವ ಶೇಖಪ್ಪ ಲಮಾಣಿ ಮನೆ ಸಿ ಸಿ ರಸ್ತೆ ನಿರ್ಮಾಣ (1514005008/RC/93393042892520689) | 184000 | 147200 |
| 05 | 1514005008-24-727 ಉಂ ಗ್ರಾ ಶಿವಾನಂದ ಇಟಗಿ ಇವರ ಮನೆಯಿಂದ ಗಂಗವ್ವ ಶೇಟ್ಟೆಣ್ಣವರ ಇವರ ಮನೆಯವರೆಗೆ ಸಿ ಸಿ ರಸ್ತೆ (1514005008/RC/93393042892520479) | 184000 | 147200 |
| 06 | 1514005008-24-678 ಉಂ ಗ್ರಾ ಕೀಷ್ಟಪ್ಪ ರಾ ಲಮಾಣಿ ಇವರ ಮನೆಯಿಂದ ನೀಲಪ್ಪ ಬಳ್ಳಾರಿ ಮನೆವರಗೆ ಸಿ ಸಿ ಚರಂಡಿ ನಿರ್ಮಾಣ (1514005008/FP/93393042892369237) | 184000 | 147200 |
| 07 | 1514005008-24-750 ಯಲ್ಲಾಪೂರ ಗ್ರಾಮದ ಬಸನಗೌಡ ಛಾದ ಅಂಗಡಿಯಿಂದ ಸಿದ್ಧಾಪೂರ ಮುಖ್ಯ ರಸ್ತೆವರೆಗೆ ಸಿ ಸಿ ರಸ್ತೆ (1514005008/RC/93393042892515298) | 368000 | 294400 |
| 08 | 1514005008-25-888 ಯಲ್ಲಾಪೂರ ಗ್ರಾಮದ ಅಂಗಡಿ ಗಿರಣಿಯಿಂದ ರಾಮಣ್ಣ ಲಮಾಣಿ ಇವರ ಮನೆಯವರೆಗೆ ಗಟಾರ ನಿರ್ಮಾಣ (1514005008/FP/93393042892363064) | 368000 | 294400 |
| 09 | 1514005008-24-720 ಯಲ್ಲಾಪೂರ ಗ್ರಾಮದ ಮಂಜಪ್ಪ ಇಟಗಿ ಇವರ ಮನೆಯಿಂದ ಯಮನಪ್ಪ ಕಳ್ಳಿಯವರ ಇವರ ಮನೆ ವರೆಗೆ ಮೋರಂ ರಸ್ತೆ ಹ (1514005008/RC/93393042892515275) | 92000 | 23000 |
| 10 | 1514005008-24-689 ಉಳ್ಳಟ್ಟಿ ಗ್ರಾಮದ ಗಂಗಪ್ಪ ಲಮಾಣಿ ಇವರ ಮನೆಯಿಂದ ಗಜಾನನ ಭವನದವರೆಗೆ ಸಿ ಸಿ ಚರಂಡಿ ನಿರ್ಮಾಣ (1514005008/FP/93393042892363062) | 184000 | 147200 |
| 11 | 1514005008-24-43 ಶ್ಯಾಬಳ ಗ್ರಾಮದ ಸೋಮಯ್ಯ ಮ ಹಿರೇಮಠ ಇವರ ಮನೆಯಿಂದ ಭಾಷಾಸಾಬ ಇವರ ಹೊಲದವರೆಗೆ ಸಿ ಸಿ ಚರಂಡಿ ನಿರ್ಮಾಣ (1514005008/FP/93393042892363045) | 92000 | 73600 |
| 12 | 1514005008-24-677 ಉಂಡೇನಹಳ್ಳಿ ಗ್ರಾಮದ ಹಂಪಮ್ಮ ಈಳಗೇರ ಇವರ ಹೊಲದಿಂದ ಯಂಕಪ್ಪ ಹುಲಕೋಟಿ ಇವರ ಹೊಲದವರೆಗೆ ಸಿ ಸಿ ಚರಂಡಿ (1514005008/FP/93393042892363052) | 184000 | 147200 |
| 13 | 1514005008-24-682 ದೊ.ಗ್ರಾ ಬಸಪ್ಪ ತಳಗೇರಿ ಮನೆಯಿಂದ ನಾಗಪ್ಪ ಗುಡಿಮನಿ ಇವರ ಮನೆಯವರೆಗೆ ಗಟಾರ ಸಿ ಸಿ ಗಟಾರ ನಿರ್ಮಾಣ (1514005008/FP/93393042892366396) | 183999 | 147200 |
| 14 | 1514005008-24-706 ದೊ ಗ್ರಾಮದ ಸೂರಣಗಿಗೆ ಹೋಗುವ ಮುಖ್ಯ ರಸ್ತೆ ಎ ಬಿ ರಗಟಿಯವರ ಹೊಲದವರೆಗೆ ರಸ್ತೆ ಸುಧಾರಣೆ (1514005008/RC/93393042892516371) | 276000 | 69000 |
| 15 | 1514005008-25-844 ಉಳ್ಳಟ್ಟಿ ಗ್ರಾಮದ ಸ್ಮಶಾನದಲ್ಲಿ ಚಿತ್ತಾಗಾರ ನಿರ್ಮಾಣ (1514005008/AV/93393042892354588) | 500000 | 300000 |
| 16 | 1514005008-25-843 ದೊಡ್ಡೂರ ಗ್ರಾಮದ ಸ್ಮಶಾನದಲ್ಲಿ ಚಿತ್ತಾಗಾರ ನಿರ್ಮಾಣ (1514005008/AV/93393042892354163) | 500000 | 300000 |
| 17 | 1514005008-25-845 ಯಲ್ಲಾಪೂರ ಗ್ರಾಮದ ಸ್ಮಶಾನದಲ್ಲಿ ಚಿತ್ತಾಗಾರ ನಿರ್ಮಾಣ (1514005008/AV/93393042892354589) | 499970 | 300000 |
| 18 | 1514005008-25-842 ಉಂಡೇನಹಳ್ಳಿ ಗ್ರಾಮದ ಸ್ಮಶಾನದಲ್ಲಿ ಚಿತ್ತಾಗಾರ ನಿರ್ಮಾಣ (1514005008/AV/93393042892354587 ) | 500000 | 300000 |
| 19 | 1514005008-25-889 ಯಲ್ಲಾಪೂರ ಗ್ರಾಮದ ಆಶ್ರಯ ಪ್ಲಾಟ್ ಅಂಗನವಾಡಿಯಿಂದ ಚಂದ್ರಪ್ಪ ಬಾಬಣ್ಣ ಲಮಾಣಿ ಇವರ ಮನೆಯವರೆ ಪಕ್ಕ ಚರಂಡಿ ನಿರ್ಮಾಣ | 92000 | 73600 |
| 20 | 1514005008-25-813 ಉಳ್ಳಟ್ಟಿ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಕಂಪೌಂಡ ನಿರ್ಮಾಣ | 200000 | 160000 |

(1) ದರಪಟ್ಟಿ ಅವಧಿ **24-12-2025** ರಿಂದ **31-12-2025** ರ ವರೆಗೆ (2) ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವ ಕೊನೆಯ ದಿನಾಂಕ **: 31-12-2025** ಮಧ್ಯಾಹ್ನ 12.30 ಘಂಟೆಯವರೆಗೆ. (3) ದರಪಟ್ಟಿ ತೆರೆಯುವ ದಿನಾಂಕ : **01-01-2026** ಮಧ್ಯಾಹ್ನ 12.30 ಘಂಟೆ ನಂತರ. (4) ಅರ್ಜಿ ಸಲ್ಲಿಸುವ ಆಸಕ್ತ ನೊಂದಾಯಿತರು ಪ್ರತ್ಯೇಕವಾಗಿ ದರಪಟ್ಟಿಗಳನ್ನು ಸಲ್ಲಿಸತಕ್ಕದ್ದು. (5) ಜಿಲ್ಲಾ ಪಂಚಾಯತ ಡಿ.ಪಿ.ಸಿ ಲಾಗಿನ್‌ನಲ್ಲಿ ನೊಂದಾಯಿತ ಆಸಕ್ತ ಸರಬರಾಜುದಾರರು ಮಾತ್ರ ದರಪಟ್ಟಿಯನ್ನು ಸಲ್ಲಿಸಬಹುದು. (6) ಷರತ್ತುಗಳು ಹಾಗೂ ಸಾಮಗ್ರಿ ವಿವರ ಮತ್ತು ನಮೂನೆ ಹಾಗೂ ಇತರೆ ವಿಷಯಗಳು ಮಾಹಿತಿಗಾಗಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕಾರ್ಯಲಯ ಇವರನ್ನು ಕಛೇರಿ ಸಮಯದ ವೇಳೆಯಲ್ಲಿ ಸಂಪರ್ಕಿಸಿ ಪಡೆಯಬಹುದಾಗಿದೆ. (7) ಈ ಮೇಲಿನ ನಮೂನೆಯಲ್ಲಿರುವ ಸಾಮಗ್ರಿಗಳ ಮೊತ್ತವನ್ನು ಅಂದಾಜಿಸಲಾಗಿದ್ದು, ಬದಲಾವಣೆ ಮಾಡಲು ಪ್ರಾಧಿಕಾರಕ್ಕೆ ಅಧಿಕಾರವಿರುತ್ತದೆ.

**ಸಹಿ/- ಅಧ್ಯಕ್ಷರು,**
**ಗ್ರಾಮ ಪಂಚಾಯತ ದೊಡ್ಡೂರ**

ವಾಸಾಸಂಇ/ಗದಗ/ಕೆಎಸ್‌ಎಂಸಿಎ/471/2025-26

**ಸಹಿ/- ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು,**
**ಗ್ರಾಮ ಪಂಚಾಯತ ದೊಡ್ಡೂರ**

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka